
ಜನಮನದ ದನಿ


# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

09 ಜನವರಿ 2026 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 297 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಸಿಡ್ನಿಯಲ್ಲಿ ಗುರುವಾರ ನಡೆದ ಆ್ಯಷಸ್ ಸರಣಿಯ ಅಂತಿಮ ಟೆಸ್ಟ್‌ನಲ್ಲಿ ಆಸ್ಟ್ರೇಲಿಯಾ, ಇಂಗ್ಲೆಂಡ್ ತಂಡವನ್ನು 5 ವಿಕೆಟ್‌ಗಳಿಂದ ಸೋಲಿಸಿತು. ಈ ಮೂಲಕ ಸರಣಿಯನ್ನು 4-1 ರಿಂದ ಗೆದ್ದುಕೊಂಡಿತು.


ಲಕ್ಷ್ಮಿ ಪುತ್ರನಿಗೆ ಸಿಕ್ಕರು ನಾಯಕಿ ಚಿಕ್ಕಣ್ಣನಿಗೆ ಜೋಡಿ ಯಾರು ? » 2


ರೈತರು ಸ್ವಾವಲಂಬಿಗಳಾಗಲು ಹೈನುಗಾರಿಕೆ ಪಾತ್ರ ಪ್ರಮುಖ » 3


ವಿಬಿ ಐ ರಾಮ್ ಜಿ ವಿರುದ್ಧ ರಾಜ್ಯ ಸರ್ಕಾರ ಐದು ನಿರ್ಣಯ » 4

# ಕುರ್ಚಿ ಕದನಕ್ಕೆ ತಾತ್ಕಾಲಿಕ ಬ್ರೇಕ್

- ಅಸ್ಸಾಂ ವಿಧಾನಸಭಾ ಚುನಾವಣೆಗೆ ವೀಕ್ಷಕರಾಗಿ ಡಿ.ಕೆ.ಶಿ. ನೇಮಕ
- ಪಂಚರಾಜ್ಯ ಚುನಾವಣೆವರೆಗೂ ಅಧಿಕಾರ ಹಂಚಿಕೆ ಇಲ್ಲ

• ಪ್ರಜೋದಯ ವರದಿ

**ಬೆಂಗಳೂರು:** ಮುಖ್ಯಮಂತ್ರಿ ಪಟ್ಟಕ್ಕಾಗಿ ಕಸರತ್ತು ಮಾಡುತ್ತಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಕಾಂಗ್ರೆಸ್ ಹೈಕಮಾಂಡ್ ಶಾಕ್ ನೀಡಿದೆ. ಪಂಚರಾಜ್ಯ ಚುನಾವಣೆ ಮುಗಿಯುವವರೆಗೂ ನಾಯಕತ್ವ ಬದಲಾವಣೆ ಬಗ್ಗೆ ಯಾವುದೇ ನಿರ್ಧಾರ ಕೈಗೊಳ್ಳದಿರಲು ನಿರ್ಧರಿಸಿದೆ ಎನ್ನಲಾಗಿದೆ.

ಈ ಮಧ್ಯೆ ಮುಂಬರುವ ಅಸ್ಸಾಂ ವಿಧಾನಸಭಾ ಚುನಾವಣೆಗೆ ಹಿರಿಯ ವೀಕ್ಷಕರಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಛತ್ತೀಸ್‌ಗಢದ ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್, ಜಾರ್ಖಂಡ್ ಮಾಜಿ ಶಾಸಕ ಬಂಧು ಟಿರ್ಕಿ ಅವರನ್ನು ನೇಮಕ ಮಾಡಲಾಗಿದೆ. ಇದರೊಂದಿಗೆ ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿ ಕದನ ಸದ್ಯಕ್ಕೆ ಮುಂದೂಡಿಕೆಯಾಗಿದೆ.

ಈ ಬಗ್ಗೆ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಕೆ. ಶಿವಕುಮಾರ್ ಅವರು, ಕಾಂಗ್ರೆಸ್ಸಿಗನಾಗಿ, ನಾನು ಪಕ್ಷಕ್ಕಾಗಿ ಕೆಲಸ ಮಾಡಬೇಕು. ನಾನು ಎಐಸಿಸಿ ಪತ್ರಿಕಾ ಪ್ರಕಟಣೆಯನ್ನು ನೋಡಿದ್ದೇನೆ. ಅವರು ಅಸ್ಸಾಂ ರಾಜ್ಯದ ಚುನಾವಣಾ ಉಸ್ತುವಾರಿ ನೋಡಿಕೊಳ್ಳಲು ನನಗೆ ಹೇಳಿದ್ದಾರೆ. ನಾನು ಬಹಳ ಹಿಂದೆಯೇ ಅಸ್ಸಾಂಗೆ ಹೋಗಿದ್ದೆ ಮತ್ತು ಈಗ ಅವರು ನನ್ನನ್ನು ಮತ್ತೆ ಅಲ್ಲಿಗೆ ಹೋಗಲು ಬಯಸುತ್ತಾರೆ. ನಾನು ಹೋಗುತ್ತೇನೆಂದು ತಿಳಿಸಿದರು. 126 ಸದಸ್ಯ ಬಲದ ಅಸ್ಸಾಂ ವಿಧಾನಸಭೆಗೆ ಮಾರ್ಚ್-ಏಪ್ರಿಲ್‌ನಲ್ಲಿ ಚುನಾವಣೆ ನಡೆಯುವ ಸಾಧ್ಯತೆ ಇದೆ.



**ಅಧಿಕಾರ ಹಂಚಿಕೆ ನಿರ್ಧಾರ ಸದ್ಯಕ್ಕಿಲ್ಲ**

ರಾಜ್ಯದಲ್ಲಿ ಅಧಿಕಾರ ಹಂಚಿಕೆ ನಿರ್ಧಾರ ಸದ್ಯ ಮಾಡುವುದಿಲ್ಲ. ಚುನಾವಣೆಗಳು ಮುಗಿಯುವವರೆಗೂ ಯಾವುದೇ ಚರ್ಚೆ ನಡೆಯುವುದಿಲ್ಲ, ಹೈಕಮಾಂಡ್ ಚುನಾವಣೆಗೆ ಹೆಚ್ಚಿನ ಮಹತ್ವ ಕೊಡಲಿದೆ ಎನ್ನಲಾಗಿದೆ. ಇನ್ನು ನಿರ್ಧಾರ ತೆಗೆದುಕೊಳ್ಳಬೇಕಾದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್, ಪ್ರಿಯಾಂಕಾ ಗಾಂಧಿ ಚುನಾವಣೆಯಲ್ಲಿ ನಿರತರಾಗಿದ್ದಾರೆ. ಇದೆಲ್ಲವನ್ನ ಗಮನಿಸಿದರೆ ಮುಖ್ಯಮಂತ್ರಿ ಕುರ್ಚಿ ಕುರಿತ ನಿರ್ಧಾರ ಏಪ್ರಿಲ್‌ವರೆಗೆ ತಾತ್ಕಾಲಿಕ ತಡೆ ಬಿಳಲಿದೆ.

> ನನಗೆ ಬೇರೆ ಆಯ್ಕೆಗಳಿಲ್ಲ. ನನ್ನ ಆಯ್ಕೆ ಪಕ್ಷ ಏನು ಹೇಳುತ್ತದೋ ಅದನ್ನ ಮಾಡುವುದು. ಪಕ್ಷ ಕೊಟ್ಟ ಜವಾಬ್ದಾರಿ ನಿರ್ವಹಿಸುವೆ. ಕಷ್ಟಕಾಲದಲ್ಲಿ ಪಕ್ಷದ ಜೊತೆಗೆ ನಿಂತಿದ್ದೇನೆ. ಪಕ್ಷವೇ ನನ್ನ ಗುಂಪು. ಚುನಾವಣೆ ಸೇರಿ ಸವಾಲಿನ ಹೊಣೆ ಹೊರಲು ನಾನು ಸಿದ್ಧನಿದ್ದೇನೆ.
> -ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

## ಸದ್ಯದಲ್ಲೇ ಜೆಡಿಎಸ್ ಬಿಜೆಪಿ ಜೊತೆ ವಿಲೀನ: ಡಿ.ಕೆ.ಶಿ.

**ಬೆಂಗಳೂರು:** ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ ಅವರ ಧೋರಣೆ ನೋಡುತ್ತಿದ್ದರೆ, ಸದ್ಯದಲ್ಲೇ ಜೆಡಿಎಸ್ ಪಕ್ಷ ಬಿಜೆಪಿ ಜೊತೆ ವಿಲೀನವಾಗುವ ಸಾಧ್ಯತೆ ಇದೆ. ವಿಲೀನವಾದರೆ ನಮಗೂ ಒಳ್ಳೆಯದೇ. ನಾವೂ ನೇರವಾಗಿ ಬಿಜೆಪಿ ಜೊತೆ ಹೋರಾಟ ಮಾಡಬಹುದು. ಆಗ ಆಟಕ್ಕೆ ಮೂರು ಪಕ್ಷ, ಲೆಕ್ಕಕ್ಕೆ ಮಾತ್ರ ಎರಡು ಪಕ್ಷ ಎಂಬ ಗೊಂದಲ ಇರುವುದಿಲ್ಲವೆಂದು ಡಿ.ಕೆ.ಶಿವಕುಮಾರ್ ಅವರು ತಿರುಗೇಟು ನೀಡಿದರು.

ಕೆಪಿಸಿಸಿ ಕಚೇರಿಯಲ್ಲಿ ಜೆಡಿಎಸ್ ಮುಖಂಡರನ್ನು ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡು ಮಾತನಾಡಿದ ಅವರು, ಬಿಜೆಪಿ, ಜೆಡಿಎಸ್ ಬೇಗ ವಿಲೀನ ಬಗ್ಗೆ ಬೇಗ ತೀರ್ಮಾನ ಮಾಡಿದರೆ ನಾವು ನಮ್ಮ ತೀರ್ಮಾನ ಮಾಡಿಕೊಳ್ಳಬಹುದು. ಅನೇಕ ಕ್ಷೇತ್ರಗಳಲ್ಲಿ ಗೊಂದಲಗಳಿವೆ. ನಮ್ಮ ಭವಿಷ್ಯ ಏನೆಂಬ ಪ್ರಶ್ನೆಯಲ್ಲಿದ್ದಾರೆ. ರಾಜಕೀಯದಲ್ಲಿ ಕುಮಾರಸ್ವಾಮಿ ಅವರಿಗಿಂತ ಹೆಚ್ಚಿನ ಅನುಭವವಿದೆ. ನಾನು ಮುಖ್ಯಮಂತ್ರಿ ಆಗದೇ ಇರಬಹುದು, ನಾನು ಬಹಳ ಕಾಲ ಸಚಿವನಾಗಿ ಕೆಲಸ ಮಾಡಿದ್ದೇನೆ. ಆಡಳಿತ ಹೇಗೆ ಮಾಡಬೇಕು, ಯಾರ ಜೊತೆ ಸಭೆ ಮಾಡಬೇಕು, ಮಾಡಬಾರದೆಂಬುದು ನನಗೆ ಚೆನ್ನಾಗಿ ಗೊತ್ತಿದೆ ಎಂದು ತಿರುಗೇಟು ನೀಡಿದರು.

# ಕಾಡಾನೆ ಉಪಟಳ: ಕಟ್ಟೆಯೊಡೆದ ರೈತರ ಆಕ್ರೋಶ

• ಪ್ರಜೋದಯ ವರದಿ

**ಬೇಲೂರು:** ತಾಲ್ಲೂಕಿನ ತೊಳಲು, ನವಿಲಹಳ್ಳಿ ಭಾಗದಲ್ಲಿ ಬೀಡು ಬಿಟ್ಟಿರುವ ಕಾಡಾನೆಗಳ ಸ್ಥಳಾಂತರಿಸಿ ನೆಮ್ಮದಿ ಬದುಕಿಗೆ ಅವಕಾಶ ಮಾಡಿಕೊಡಬೇಕೆಂದು ಆಗ್ರಹಿಸಿ ಗ್ರಾಮಸ್ಥರು ಮೂಡಿಗೆರೆ ರಸ್ತೆ ಬಂದ್ ಮಾಡಿ ಗುರುವಾರ ಪ್ರತಿಭಟನೆ ನಡೆಸಿದರು.



ಮುಖ್ಯ ರಸ್ತೆ ತಡೆದು ಟೈಯರ್‌ಗೆ ಬೆಂಕಿ ಹಚ್ಚಿದ ಪ್ರತಿಭಟನಾಕಾರರು ರಾಜ್ಯ ಸರ್ಕಾರ ಹಾಗು ಅರಣ್ಯ ಇಲಾಖೆ ವಿರುದ್ಧ ಧಿಕ್ಕಾರ ಕೂಗಿದರು. ತೊಳಲು ಗ್ರಾಮ ಪಂಚಾಯಿತಿ ವ್ಯಾಪ್ತಿಯ ನವಿಲಹಳ್ಳಿ, ಸಿದ್ದರಹಳ್ಳಿ, ಕಂದಾವರ, ತೊಳಲು ಸೇರಿ ಅಕ್ಕಪಕ್ಕದ ಗ್ರಾಮದಲ್ಲಿ 25ಕ್ಕೂ ಹೆಚ್ಚು ಕಾಡಾನೆಗಳು ಬೀಡು ಬಿಟ್ಟಿವೆ. ಹಲವು ದಿನಗಳಿಂದ ಇಲ್ಲಿಯೇ ಠಿಕಾಣಿ ಹೂಡಿರುವುದರಿಂದ ಅಪಾರ ಪ್ರಮಾಣದ ಬೆಳೆ ನಷ್ಟವಾಗಿರುವುದು ಮಾತ್ರವಲ್ಲದೆ ದಾಳಿ ಭೀತಿಯಿಂದ ಮಕ್ಕಳು ಶಾಲಾ-ಕಾಲೇಜಿಗೆ ಹೋಗಲು ಹಿಂದೇಟು ಹಾಕುತ್ತಿದ್ದಾರೆ. ಈ ಬಗ್ಗೆ ಅರಣ್ಯ ಇಲಾಖೆಗೆ ಎಷ್ಟೇ ಮನವಿ ಮಾಡಿದರೂ ಪ್ರಯೋಜನವಾಗಿಲ್ಲವೆಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.



ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಕುಮಾರ್ ಅವರು ಮಾತನಾಡಿ, ನಾಲ್ಕೈದು ದಿನಗಳಿಂದ ಕಾಡಾನೆಗಳ ಉಪಟಳ ಮಿತಿ ಮೀರಿದೆ. ತಿಂಗಳ ಹಿಂದಷ್ಟೇ ಜೋಳ, ಕಾಫಿ, ಅಡಿಕೆ ಮತ್ತು ಇನ್ನಿತರ ಬೆಳೆಗಳನ್ನು ತುಳಿದು ಹಾಳು ಮಾಡಿದ್ದ ಕಾಡಾನೆಗಳು ಈ ಭಾಗದಲ್ಲಿ ಹೆಚ್ಚು ಹಾನಿ ಮಾಡುತ್ತಿವೆ. ಮೂರು ದಿನಗಳಿಂದ ಕೂಲಿ ಕಾರ್ಮಿಕರು ಕೆಲಸಕ್ಕೆ ಬಾರದೆ ಕಾಫಿ ಬೆಳೆ ಸಂಪೂರ್ಣ ಹಾಳಾಗುತ್ತಿದೆ. ಅಧಿಕಾರಿ ಮತ್ತು ಜನಪ್ರತಿನಿಧಿಗಳ ಕಣ್ಣೊರೆಸುವ ಮಾತುಗಳು ಬೇಕಾಗಿಲ್ಲವೆಂದರು. ವೃತ್ತ ನಿರೀಕ್ಷಕ ಜಗದೀಶ್, ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಗ್ರಾಮಸ್ಥರು ವಾಗ್ವಾದ ನಡೆಸಿದರು.

» ನಾಲ್ಕನೇ ಪುಟದಲ್ಲಿ

## ಶಾಸಕ ಎ.ಮಂಜು ನಿವಾಸಕ್ಕೆ ನಿಖಿಲ್ ಕುಮಾರಸ್ವಾಮಿ ಭೇಟಿ



• ಪ್ರಜೋದಯ ವರದಿ

**ಹಾಸನ:** ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಗುರುವಾರ ಅರಕಲಗೂಡು ಶಾಸಕ ಎ. ಮಂಜು ಅವರ ಬೆಂಗಳೂರಿನ ನಿವಾಸಕ್ಕೆ ಭೇಟಿ ನೀಡಿ ಸುದೀರ್ಘ ಚರ್ಚೆ ನಡೆಸಿದರು.

ಜ.24ರಂದು ಹಾಸನದಲ್ಲಿ ಜೆಡಿಎಸ್ ಸಮಾವೇಶ ಹಮ್ಮಿಕೊಂಡಿದ್ದು, ಆ ಬಗ್ಗೆ ಚರ್ಚಿಸಲಾಗಿದೆ. 2028ರ ವಿಧಾನಸಭಾ ಚುನಾವಣೆಯಲ್ಲಿ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ಅರಸೀಕೆರೆ ಕ್ಷೇತ್ರದಿಂದ ಸ್ಪರ್ಧಿಸಬೇಕೆಂಬ ಮಾತುಗಳು ಜಿಲ್ಲೆಯಲ್ಲಿ ಜೋರಾಗಿದ್ದು, ಈ ಬಗ್ಗೆಯೂ ಮಾತುಕತೆ ನಡೆಸಿದ್ದಾರೆ ಎನ್ನಲಾಗಿದೆ.

ಪಕ್ಷ ಸಂಘಟನೆ ಹಾಗು ಮುಂದಿನ ಚುನಾವಣೆ ಬಗ್ಗೆ ಚರ್ಚಿಸಿದ್ದೇವೆಂದು ಶಾಸಕ ಎ.ಮಂಜು ಪ್ರತಿಕ್ರಿಯಿಸಿದ್ದಾರೆ. ಮಂಜು ಅವರ ನಿವಾಸದಲ್ಲಿ ಉಪಾಹಾರ ಸೇವಿಸಿದ ನಿಖಿಲ್ ಕುಮಾರಸ್ವಾಮಿ ಗಂಟೆಗೂ ಹೆಚ್ಚು ಕಾಲ ಮಾತುಕತೆ ನಡೆಸಿದರು. ಈ ವೇಳೆ ಎ.ಮಂಜು ಅವರ ಪುತ್ರ, ಕೊಡಗು ಕ್ಷೇತ್ರದ ಕಾಂಗ್ರೆಸ್ ಶಾಸಕ ಡಾ|| ಮಂತರ್‌ಗೌಡ, ಎ.ಮಂಜು ಅವರ ಪತ್ನಿ ತಾರಾ ಮಂಜು ಇದ್ದರು.

# ಯಾವ ಕ್ಷೇತ್ರಕ್ಕೆ ಟಿಕೆಟ್ ಕೊಡುತ್ತಾರೋ ಅಲ್ಲಿಯೇ ಸ್ಪರ್ಧೆ

## ಪಕ್ಷದ ತೀರ್ಮಾನಕ್ಕೆ ಬದ್ಧ: ಮಾಜಿ ಸಚಿವ ಹೆಚ್.ಡಿ.ರೇವಣ್ಣ

• ಪ್ರಜೋದಯ ವರದಿ

**ಹಾಸನ:** ಪಕ್ಷದ ರಾಷ್ಟ್ರೀಯ ಅಧ್ಯಕ್ಷರು, ರಾಜ್ಯಾಧ್ಯಕ್ಷರು ಎಲ್ಲಿ ಸ್ಪರ್ಧೆ ಮಾಡಬೇಕೆಂದು ನಿರ್ಧರಿಸುತ್ತಾರೋ ಅಲ್ಲಿಯೇ ನಿಲ್ಲುವೆ. ಅದಕ್ಕಾಗಿಯೇ ಸ್ಕೀನಿಂಗ್ ಕಮಿಟಿ ಇದ್ದು, ಯಾವ ಕ್ಷೇತ್ರಕ್ಕೆ ಟಿಕೆಟ್ ಕೊಡುತ್ತಾರೋ ಅಲ್ಲಿ ನಾನು ಸ್ಪರ್ಧೆ ಮಾಡುವುದಾಗಿ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ತಿಳಿಸಿದರು.

ಗುರುವಾರ ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಜಿಲ್ಲೆಗೆ ಹೈಕಮಾಂಡ್ ಅಲ್ಲ, ಕಾರ್ಯಕರ್ತರೇ ಹೈಕಮಾಂಡ್, ಪಕ್ಷದ ತೀರ್ಮಾನಕ್ಕೆ ಬದ್ಧ. ಹೊಳೆನರಸೀಪುರ ಕ್ಷೇತ್ರದಿಂದ 6 ಬಾರಿ ಶಾಸಕನಾಗಿದ್ದೇನೆ. ಇಲ್ಲಿನ ಜನರು ನಮ್ಮ ಕುಟುಂಬಕ್ಕೆ ಶಕ್ತಿ ಕೊಟ್ಟಿದ್ದಾರೆ. ಜಿಲ್ಲೆಯಲ್ಲಿ ಬಾಕಿ ಇರುವ ಅಭಿವೃದ್ಧಿ ಕೆಲಸ ಆಗುವವರೆಗೂ ಜನರ ಆಶೀರ್ವಾದದಿಂದ ನಾನು ರಾಜಕೀಯದಲ್ಲಿರುವೆ ಎಂದು ಹೇಳಿದರು.

ಇದೇ ವೇಳೆ ಬಿಜೆಪಿ-ಜೆಡಿಎಸ್ ಹೊಂದಾಣಿಕೆ ವಿಚಾರದ ಬಗ್ಗೆ ಪ್ರತಿಕ್ರಿಯಿಸಿ, ರಾಷ್ಟ್ರೀಯ ಮಟ್ಟದಲ್ಲಿ ಆಗುವ ತೀರ್ಮಾನಕ್ಕೆ ನಾವೆಲ್ಲರೂ ಬದ್ಧ. ಈ ರಾಷ್ಟ್ರ ಉಳಿಯಬೇಕಾದರೆ ಪ್ರಧಾನಿ ನರೇಂದ್ರ ಮೋದಿ ಅವರು ಬೇಕು ಎಂದರು.



**ಕೆಐಎಡಿಬಿ ಜಾಗದಲ್ಲಿ ಸಮಾವೇಶ**

ಜ.24 ರಂದು ನಡೆಸಲು ಉದ್ದೇಶಿಸಿರುವ ಜೆಡಿಎಸ್ ಸಮಾವೇಶಕ್ಕೆ ಪೂರ್ವ ಸಿದ್ಧತೆಗಳು ನಡೆಯುತ್ತಿವೆ. ಸಮಾವೇಶದಲ್ಲಿ ರಾಷ್ಟ್ರೀಯ ಅಧ್ಯಕ್ಷ ಹೆಚ್.ಡಿ.ದೇವೇಗೌಡರು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ವಿರೋಧ ಪಕ್ಷದ ನಾಯಕರಾದ ಸುರೇಶ್ ಬಾಬು, ಪರಿಷತ್ ವಿಪಕ್ಷ ನಾಯಕ ಭೋಜೇಗೌಡ, ಮಾಜಿ ಸಚಿವರು, ಶಾಸಕರು, ಮಾಜಿ ಶಾಸಕರು ಭಾಗಿಯಾಗಲಿದ್ದಾರೆ. ಸಮಾವೇಶಕ್ಕೆ ಸುಮಾರು ಒಂದೂವರೆಯಿಂದ 2 ಲಕ್ಷ ಜನ ಸೇರಲಿದ್ದಾರೆ. ಸಮಾವೇಶವನ್ನು ನಗರದ ಬಿ.ಎಂ. ರಸ್ತೆ ಪಕ್ಕದ ಕೆಐಎಡಿಬಿಗೆ ಸೇರಿದ ಜಾಗದಲ್ಲಿ ನಡೆಸಲು ಉದ್ದೇಶಿಸಲಾಗಿದೆ. ಇದಕ್ಕಾಗಿ ಅಗತ್ಯ ಶುಲ್ಕ ಸಹ ಪಾವತಿ ಮಾಡಲಾಗಿದೆ ಎಂದರು.

ಸಮಾವೇಶದ ಉದ್ದೇಶ ಈ ಸರ್ಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಕಳೆದಿದ್ದರೂ ಯಾವುದೇ ಅಭಿವೃದ್ಧಿ ಕೆಲಸ ಆಗಿಲ್ಲ, ಜಿಲ್ಲೆಗೆ ಈ ಸರ್ಕಾರದ ಕೊಡುಗೆ, ಸಾಧನೆ ಏನು, ಅದನ್ನು ಜಿಲ್ಲೆಯ ಜನರಿಗೆ ಮನದಟ್ಟು ಮಾಡುವುದು ಮತ್ತು ಗ್ರಾಮ ಪಂಚಾಯಿತಿ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗೆ ಪಕ್ಷ ಸಂಘಟನೆ ಮಾಡುವುದಾಗಿದೆ.

ದೇವೇಗೌಡರು, ಕುಮಾರಸ್ವಾಮಿ, ನಾನು ಸೇರಿ ನಮ್ಮ ಪಕ್ಷದ ಕೊಡುಗೆ ಜಿಲ್ಲೆಗೆ ದೊಡ್ಡದಿದೆ. ಅದನ್ನು ಜನರಿಗೆ ಹೇಳುತ್ತೇವೆ. ಈ ಮೂಲಕ ಪ್ರಾದೇಶಿಕ ಪಕ್ಷವನ್ನು ಉಳಿಸಿ ಎಂದು ಮನವಿ ಮಾಡುತ್ತೇವೆ ಎಂದರು. ನಮ್ಮದು ಪ್ರಾದೇಶಿಕ ಪಕ್ಷ, ನಾಯಕರನ್ನು ಬೆಳೆಸುವ ಪಕ್ಷ, ಆದರೆ, ರಾಷ್ಟ್ರೀಯ ಪಕ್ಷದವರು, ನಾವು ಬೆಳೆಸಿದವರನ್ನು ಕರೆದುಕೊಂಡು ಹೋಗುತ್ತಾರೆಂದು ಕುಟುಕಿದರು. ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್, ಮಾಜಿ ಮೇಯರ್ ಗಿರೀಶ್ ಚನ್ನವೀರಪ್ಪ, ಬಿದರಿಕೆರೆ ಜಯರಾಂ ಇದ್ದರು.

## ಜೆಡಿಎಸ್ ಸಮಾವೇಶ: ಜಿಲ್ಲಾದ್ಯಂತ ಪೂರ್ವಭಾವಿ ಸಭೆ

• ಪ್ರಜೋದಯ ವರದಿ

**ಹಾಸನ:** ಜೆಡಿಎಸ್ ಬೃಹತ್ ಸಮಾವೇಶ ಹಮ್ಮಿಕೊಳ್ಳುವ ಹಿನ್ನಲೆ ಜ.11 ರಿಂದ ಜಿಲ್ಲಾದ್ಯಂತ ಪೂರ್ವಭಾವಿ ಸಭೆ ನಡೆಸಲಾಗುವುದೆಂದು ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್. ಲಿಂಗೇಶ್ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜ.11 ರಂದು ಬೇಲೂರಿನ ಚನ್ನಕೇಶವ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಬೇಲೂರು ಪಟ್ಟಣದಲ್ಲಿ ಮೊದಲ ಪೂರ್ವಭಾವಿ ಸಭೆ ನಡೆಸಲಾಗುವುದು. ಅದೇ ದಿನ ಚನ್ನರಾಯಪಟ್ಟಣ ತಾಲ್ಲೂಕು ದಂಡಿನಗನಹಳ್ಳಿಯಲ್ಲಿ ಸಭೆ ನಡೆಲಿದೆ. ಜ.12 ರಂದು ಬೆಳಿಗ್ಗೆ ಹೊಳೆನರಸೀಪುರ, ಮಧ್ಯಾಹ್ನ ಸಕಲೇಶಪುರ, ಜ.13 ರಂದು ಆಲೂರಿನಲ್ಲಿ ಸಭೆ ನಡೆಯಲಿದೆ. ಜ.17 ರ ಬೆಳಿಗ್ಗೆ ಅರಕಲಗೂಡು, ಮಧ್ಯಾಹ್ನ ಅರಸೀಕೆರೆಯಲ್ಲಿ ಸಭೆ ನಡೆಯಲಿದೆ. ಜ.19 ರಂದು ಮಧ್ಯಾಹ್ನ ನಗರದಲ್ಲಿ ಅಂತಿಮ ಪೂರ್ವ ಸಿದ್ಧತಾ ಸಭೆ ನಿಗದಿಯಾಗಿದೆ ಎಂದು ವಿವರಿಸಿದರು.

ಮಾಜಿ ಸಚಿವ ರೇವಣ್ಣ ಅವರ ಮಾರ್ಗದರ್ಶನದಲ್ಲಿ ಪೂರ್ವ ಸಿದ್ಧತೆ, ಸಭೆಗಳನ್ನು ನಡೆಸಲಾಗುತ್ತಿದೆ. ಎಲ್ಲರೂ ಸಹಕಾರ ನೀಡುವ ಮೂಲಕ ಸಮಾವೇಶ ಯಶಸ್ವಿಗೊಳಿಸಬೇಕು. ರೇವಣ್ಣ ಅವರು ಅರಸೀಕೆರೆಯಿಂದ ಸ್ಪರ್ಧೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಪ್ರಜಾಪ್ರಭುತ್ವ, ಯಾರು ಎಲ್ಲಿ ಬೇಕಾದರೂ ಕಣಕ್ಕಿಳಿಯಬಹುದು. ರೇವಣ್ಣ ಅವರು ಏನನ್ನೂ ಹೇಳಿಲ್ಲ, ರೇವಣ್ಣರವರ ಕೊಡುಗೆ ಇದ್ದು, ಅಭಿವೃದ್ಧಿ ಹರಿಕಾರ ಎನಿಸಿ ಕೊಂಡಿದ್ದಾರೆ. ಈ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದರು.

ತಾಲ್ಲೂಕು ಅಧ್ಯಕ್ಷ ಎಸ್.ದ್ಯಾವೇಗೌಡ, ಮುಖಂಡರಾದ ಲಕ್ಷ್ಮಣ್‌ಗೌಡ, ಹೊನ್ನವಳ್ಳಿ ಸತೀಶ್, ಸತ್ಯಮಂಗಲ ರಘು, ಸಮೀರ್ ಇದ್ದರು.

## ಹೊಳೆನರಸೀಪುರ ತಾ.ಪಂ.ಗೆ ಹೆಚ್ಚುವರಿ ಅನುದಾನಕ್ಕೆ ಸಮ್ಮತಿ

• ಪ್ರಜೋದಯ ವರದಿ

**ಹೊಳೆನರಸೀಪುರ:** ಪಟ್ಟಣದಲ್ಲಿ ನೂತನ ತಾಲ್ಲೂಕು ಪಂಚಾಯಿತಿ ಕಟ್ಟಡ ಕಾಮಗಾರಿಗೆ ಹೆಚ್ಚುವರಿ 2.40 ಕೋ.ರೂ. ಅನುದಾನ ಬಿಡುಗಡೆಗೆ ರಾಜ್ಯ ಸರ್ಕಾರ ಸಮ್ಮತಿ ಸೂಚಿಸಿದೆ.

2021-22ರ ಅವಧಿಯಲ್ಲಿ ಕಾಮಗಾರಿಗೆ 9.90 ಕೋ.ರೂ. ಬಿಡುಗಡೆಯಾಗಿತ್ತು. ಆದರೆ ಅನುದಾನ ಕೊರತೆಯಿಂದ ಕಾಮಗಾರಿ ಕುಂಟುತ್ತಾ ಸಾಗಿದ್ದು, ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ ಸಂಸದ ಶ್ರೇಯಸ್ ಅಧಿಕಾರಿಗಳಿಂದ ಮಾಹಿತಿ ಪಡೆದು ಹೆಚ್ಚುವರಿ ಅನುದಾನಕ್ಕಾಗಿ ಪ್ರಸ್ತಾವನೆ ಸಲ್ಲಿಸಿದ್ದರು. ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರ ಗಮನಕ್ಕೆ ತಂದಿದ್ದರು.

ಸಂಸದರ ಮನವಿಗೆ ಸ್ಪಂದಿಸಿರುವ ಸರ್ಕಾರ ಹೆಚ್ಚುವರಿ ಅನುದಾನ ನೀಡಲು ಅನುಮೋದನೆ ನೀಡಿದೆ. ಅನುದಾನ ಕೊರತೆಯಿಂದ ಸ್ಥಗಿತಗೊಂಡಿದ್ದ ಕಟ್ಟಡ ಕಾಮಗಾರಿಗೆ ವೇಗ ಸಿಗುವ ನಿರೀಕ್ಷೆ ಹೆಚ್ಚಿದೆ. ಈ ಕುರಿತು ಪ್ರತಿಕ್ರಿಯಿಸಿರುವ ಸಂಸದ ಶ್ರೇಯಸ್ ಅವರು, ಸದಾ ಅಭಿವೃದ್ಧಿ ಪರ ಚಿಂತನೆಯೊಂದಿಗೆ ಕಾರ್ಯನಿರ್ವಹಿಸುವ ನಮ್ಮ ಸರ್ಕಾರವು ಬಹುದಿನಗಳ ಬೇಡಿಕೆಗೆ ಸ್ಪಂದಿಸಿದೆ. ಈ ಯೋಜನೆಯಿಂದ ತಾಲ್ಲೂಕಿನ ಆಡಳಿತ ವ್ಯವಸ್ಥೆಗೆ ಹೊಸ ಬಲ ದೊರೆಯುವ ಆಶಾಭಾವ ಮೂಡಿದೆ ಎಂದಿದ್ದಾರೆ.

# ರೈತರ ಕಡೆಗಣನೆ: ರಾಜ್ಯಾದ್ಯಂತ ಜನಾಂದೋಲನ

## ರೈತ ಸಂಘದ ರಾಜ್ಯಾಧ್ಯಕ್ಷ ಸಂಗಣ್ಣ ಬಾಗೇವಾಡಿ

• ಪ್ರಜೋದಯ ವರದಿ

**ಹಾಸನ:** ರಾಜ್ಯ ಸರ್ಕಾರ ರೈತರನ್ನು ಸಂಪೂರ್ಣ ಕಡೆಗಣಿಸಿರುವ ಹಿನ್ನಲೆಯಲ್ಲಿ ರೈತ ಸಂಘ ರಾಜ್ಯದ ಪ್ರತಿ ಜಿಲ್ಲೆಗಳಲ್ಲೂ ಪ್ರವಾಸ ಮಾಡಿ ರೈತರ ಕುಂದು ಕೊರತೆ ಆಲಿಸಿ, ಜನಾಂದೋಲನ ರೂಪಿಸಲಾಗುತ್ತಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಸಂಗಣ್ಣ ಬಾಗೇವಾಡಿ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ಸರಿಯಾಗಿ ನಡೆಯುತ್ತಿಲ್ಲ. ಕೃಷಿ ಸಚಿವರನ್ನು ಕೇಳಿದರೆ ಕೇಂದ್ರ ಸರ್ಕಾರ ಹಣ ಒದಗಿಸಿಲ್ಲ ಎನ್ನುತ್ತಾರೆ. ರಾಜ್ಯ ಸರ್ಕಾರ ಕೇವಲ ಕಣ್ಣೊರೆಸುವ ಕೆಲಸ ಮಾಡುತ್ತಿದೆ. ಭತ್ತ ಖರೀದಿ ಕೇಂದ್ರವನ್ನೂ ಆರಂಭಿಸಿಲ್ಲ. ಹೆಚ್ಚು ಬೆಳೆ ಬೆಳೆದಿದ್ದನ್ನು ರೈತರು ಎಲ್ಲಿ ಮಾರಾಟ ಮಾಡಬೇಕೆಂದು ಪ್ರಶ್ನಿಸಿದರು.




ಎಂಎಸ್‌ಪಿ ಹಣ ಬಿಡುಗಡೆಯಾದರೆ ಮಾತ್ರ ಖರೀದಿ ಕೇಂದ್ರ ಆರಂಭ ಮಾಡುತ್ತೇವೆ ಎನ್ನುತ್ತಾರೆ. ಫಸಲು ಸಂಸ್ಕರಣೆ ಮಾಡಲು ನಮಗೆ ಕೋಲ್ಡ್ ಸ್ಟೋರೇಜ್ ಕೊಟ್ಟಿದ್ದಾರಾ ಎಂದು ಪ್ರಶ್ನೆ ಮಾಡಿದ ಅವರು, ಈ ಎಲ್ಲಾ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಫೆ.6 ರಂದು ತಾಲ್ಲೂಕಿನ ಶಾಂತಿಗ್ರಾಮದಲ್ಲಿ ರೈತರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ತುಂಗಭದ್ರ ಅಣೆಕಟ್ಟೆ ಹೂಳು ತೆಗೆಯುವುದಾಗಿ, ಅಣೆಕಟ್ಟೆ ಎತ್ತರ

» ನಾಲ್ಕನೇ ಪುಟದಲ್ಲಿ

## ನ್ಯಾಷನಲ್ ಹೆರಾಲ್ಡ್‌ಗೆ ಕಾಂಗ್ರೆಸ್ ಲಂಚ: ಜೋಶಿ

• ಪ್ರಜೋದಯ ವರದಿ

**ಬೆಂಗಳೂರು:** ಕಾಂಗ್ರೆಸ್ ಸರ್ಕಾರವು ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ಸರ್ಕಾರಿ ಜಾಹೀರಾತುಗಳ ಮೂಲಕ ಅಪಾರ ದುಡ್ಡು ನೀಡಿದ್ದು, ನೆಹರೂ-ಗಾಂಧಿ ಕುಟುಂಬಕ್ಕೆ ಲಂಚ ನೀಡಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಗುರುವಾರ ಆರೋಪಿಸಿದ್ದಾರೆ.

ರಾಜ್ಯ ಸರ್ಕಾರವು ದೇಶದ ಸ್ಥಾಪಿತ ಪತ್ರಿಕೆಗಳು ಅಥವಾ ನಿಯತ ಕಾಲಿಕೆಗಳಿಗಿಂತ ಹೆಚ್ಚಿನ ಜಾಹೀರಾತನ್ನು ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ನೀಡಿದೆ. ಇದು ಸಹ ಹಗರಣವೆಂದರು.

# ಲೋಕಾಯುಕ್ತ ಬಲೆಗೆ ಗ್ರಾಮ ಲೆಕ್ಕಾಧಿಕಾರಿ

• ಪ್ರಜೋದಯ ವರದಿ

**ಅರಸೀಕೆರೆ:** ಕಲ್ಲು ಗಣಿಗಾರಿಕೆಗೆ ಅನುಮತಿ ನೀಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದ ಗ್ರಾಮ ಲೆಕ್ಕಾಧಿಕಾರಿ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ತಾಲ್ಲೂಕು ಕಚೇರಿಯಲ್ಲಿ ಗುರುವಾರ ನಡೆದಿದೆ.

ಗ್ರಾಮ ಲೆಕ್ಕಾಧಿಕಾರಿ ಶಿವಕುಮಾರ್ ಅವರು ತಾಲ್ಲೂಕಿನ ಕಣಕಟ್ಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಲ್ಲು ಗಣಿಗಾರಿಕೆ ನಡೆಸಲು ಅನುಮತಿಗೆ ವರದಿ ನೀಡಲು, ಹಾಸನದ ಬಸಟ್ಟಿ ಕೊಪ್ಪಲು ನಿವಾಸಿ ರಮೇಶ್ ಎಂಬುವವರಿಂದ 60 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ.



ಲಂಚದ ಮೊತ್ತದಲ್ಲಿ ಮೊದಲ ಹಂತವಾಗಿ ಗುರುವಾರ ಅರಸೀಕೆರೆಯ ಹೋಟೆಲ್‌ವೊಂದರಲ್ಲಿ 45 ಸಾವಿರ ರೂ. ಹಣ ನೀಡುವಂತೆ ಸೂಚಿಸಿದ್ದ. ಶಿವಕುಮಾರ್, ಹಣ ಪಡೆಯುತ್ತಿ ದ್ದಾಗಲೇ ಲೋಕಾಯುಕ್ತ ಅಧಿಕಾರಿ ಗಳು ದಾಳಿ ನಡೆಸಿ, ಲಂಚದ ಹಣದ ಸಮೇತ ಗ್ರಾಮ ಲೆಕ್ಕಾಧಿಕಾರಿ ಶಿವಕುಮಾರ್ ಅವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಲೋಕಾಯುಕ್ತ ವರಿಷ್ಠಾಧಿಕಾರಿ ಮಾರ್ಗದರ್ಶನ ದಲ್ಲಿ ಇನ್ಸ್‌ಪೆಕ್ಟರ್‌ಗಳಾದ ಶಿಲ್ಪಾ ಹಾಗು ಚಂದ್ರಶೇಖರ್ ಅವರ ನೇತೃತ್ವದಲ್ಲಿ ಈ ದಾಳಿ ನಡೆಯಿತು. ವಶಕ್ಕೆ ಪಡೆದಿರುವ ಶಿವಕುಮಾರ್ ಅವರ ವಿರುದ್ಧ ವಿಚಾರಣೆ ಮುಂದು ವರೆದಿದ್ದು, ಪ್ರಕರಣ ಸಂಬಂಧ ಹೆಚ್ಚಿನ ತನಿಖೆ ಕೈಗೊಳ್ಳಲಾಗಿದೆ ಎಂದು ಲೋಕಾಯುಕ್ತ ಪೊಲೀಸರು ತಿಳಿಸಿದ್ದಾರೆ.

## ಶೀಘ್ರ ಗೃಹಲಕ್ಷ್ಮಿ ಬಾಕಿ ಹಣ ಬಿಡುಗಡೆ

• ಪ್ರಜೋದಯ ವರದಿ

**ಬೆಂಗಳೂರು:** ಹಣಕಾಸು ಇಲಾಖೆ ಅನುಮತಿ ನೀಡಿದ ತಕ್ಷಣವೇ 2025ರ ಫೆಬ್ರವರಿ ಹಾಗು ಮಾರ್ಚ್ ತಿಂಗಳ ಗೃಹಲಕ್ಷ್ಮಿ ಹಣವನ್ನು ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗುವುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಹೇಳಿದರು.

ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿ, ಎರಡು ತಿಂಗಳ ಗೃಹಲಕ್ಷ್ಮಿ ಯೋಜನೆ ಹಣ ಬಿಡುಗಡೆ ಕುರಿತಂತೆ ಈಗಾಗಲೇ ಮುಖ್ಯಮಂತ್ರಿ ಬಳಿ ಮಾತನಾಡಿದ್ದು, ಅವರೂ ಸದನದಲ್ಲಿ ಉತ್ತರ ಕೊಟ್ಟಿದ್ದಾರೆಂದರು.

ಅನರ್ಹ ರೇಷನ್ ಕಾರ್ಡ್ ರದ್ದಾಗಿರುವ ಕಾರಣ ಕೆಲವರಿಗೆ ಹಣ ಸಂದಾಯವಾಗಿಲ್ಲ. ಆಹಾರ ಇಲಾಖೆಯಿಂದ ಹೊಸ ಡೇಟಾ ಬಂದ ತಕ್ಷಣ ಅವರಿಗೂ ದುಡ್ಡು ಬಿಡುಗಡೆ ಆಗಲಿದೆ. ರೇಷನ್ ಕಾರ್ಡ್ ಆಧರಿಸಿ ನಾವು ಗೃಹಲಕ್ಷ್ಮಿ ಫಲಾನುಭವಿಗಳಿಗೆ ದುಡ್ಡು ಹಾಕುತ್ತಿದ್ದೇವೆ. ಕೆಲ ರೇಷನ್ ಕಾರ್ಡ್ ರದ್ದಾದಾಗ ಸಮಸ್ಯೆಯಾಗಿದೆ. ಅವರು ತೆರಿಗೆ ಪಾವತಿದಾರರಲ್ಲದಿದ್ದಲ್ಲಿ ಹಣ ಸಿಗಲಿದೆ ಎಂದರು.

## ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ ತೊಂದರೆ | ಗಮನ ಹರಿಸದ ರಾಜ್ಯ ಸರ್ಕಾರ

# ವರ್ಷದಿಂದ ಡಿಜಿಟಲ್ ಲೈಬ್ರರಿಗೆ ಅಂಕುಶ

• ಪ್ರಜೋದಯ ವರದಿ

**ಹಾಸನ:** ಸಾರ್ವಜನಿಕರು, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಓದುವವರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ರಾಜ್ಯಾದ್ಯಂತ ಜಾರಿಗೊಳಿಸಿದ್ದ ಡಿಜಿಟಲ್ ಲೈಬ್ರರಿ ವ್ಯವಸ್ಥೆ ಕಳೆದ ಒಂದು ವರ್ಷದಿಂದ ಸ್ಥಗಿತಗೊಂಡಿದೆ.

ನಗರ ಕೇಂದ್ರ ಗ್ರಂಥಾಲಯ ಸೇರಿ ಜಿಲ್ಲೆಯ ಎಂಟು ಕಡೆ ಡಿಜಿಟಲ್ ಗ್ರಂಥಾಲಯವನ್ನು ನಾಲ್ಕು ವರ್ಷಗಳ ಹಿಂದೆ ಅನುಷ್ಠಾನಗೊಳಿಸಲಾಗಿತ್ತು. ಆದರೆ, ಜವಾಬ್ದಾರಿ ವಹಿಸಿಕೊಂಡಿದ್ದ ಕೆಡಿಪಿಎಲ್ ಎಂಬ ಸಂಸ್ಥೆಯ ಅವಧಿ ಮೂರು ವರ್ಷಕ್ಕೆ ಪೂರ್ಣಗೊಂಡಿದ್ದು, ನಂತರ ಅದು ಸ್ಥಗಿತಗೊಳಿಸಿದೆ. ಡಿಜಿಟಲ್ ಗ್ರಂಥಾಲಯಕ್ಕೆ ಬೇಡಿಕೆ ಇದ್ದರೂ ಸರ್ಕಾರದ ಮಟ್ಟದಲ್ಲಿ ಪ್ರಕ್ರಿಯೆ ನಡೆದಿಲ್ಲ. ಸದಸ್ಯತ್ವ ಪಡೆದ ಓದುಗರು ಅದರಿಂದ ಪ್ರಯೋಜನ ಪಡೆಯದಂತಾಗಿದೆ. ಇನ್ನು ಆ ಉದ್ದೇಶಕ್ಕಾಗಿಯೇ ಅಳವಡಿಸಿದ್ದ ಕಂಪ್ಯೂಟರ್‌ಗಳು ದೂಳು ಹಿಡಿದಿವೆ. ಕೆಲವೆಡೆ ಕಚೇರಿ ಕೆಲಸಕ್ಕಾಗಿ ಬಳಸಿಕೊಳ್ಳುತ್ತಿದ್ದಾರೆ. ಜಗತ್ತು ಆಧುನಿಕ ತಂತ್ರಜ್ಞಾನದ ಜೊತೆಗೆ ಪೈಪೋಟಿ ನಡೆಸುತ್ತಿರುವ ದಿನಗಳಲ್ಲಿ ಗ್ರಂಥಾಲಯ ವ್ಯವಸ್ಥೆ ಮಾತ್ರ ವರ್ಷದಿಂದ ವರ್ಷಕ್ಕೆ ಹಿಂದಿನ ದಿನಗಳಿಗೆ ಮರಳುವ ಪರಿಸ್ಥಿತಿ ನಿರ್ಮಾಣವಾಗಿದೆ.



**ಡಿಜಿಟಲ್ ಗ್ರಂಥಾಲಯ ನಿರ್ವಹಣೆ**

ಕೆಲವು ಪುಸ್ತಕಗಳು ಮುದ್ರಣ ರೂಪದಲ್ಲಿ ಸಿಗುವುದಿಲ್ಲ. ಅಂತಹವುಗಳನ್ನು ಆನ್‌ಲೈನ್‌ನಲ್ಲಿ ಓದಬಹುದು. ಅದಕ್ಕಾಗಿ ಡಿಜಿಟಲ್ ಗ್ರಂಥಾಲಯ ಪರಿಕಲ್ಪನೆ ಅನುಷ್ಠಾನಗೊಳಿಸಲಾಯಿತು. ಇ-ಲೈಬ್ರರಿಗೆ ಸದಸ್ಯತ್ವ ಪಡೆದವರು ದಿನದ ಒಂದು ಗಂಟೆ ಗ್ರಂಥಾಲಯದ ಕಂಪ್ಯೂಟರ್ ಆನ್ ಮಾಡಿಕೊಂಡು ತಮಗೆ ಬೇಕಾದ ಮಾಹಿತಿಯನ್ನು ಓದಬಹುದಿತ್ತು. ಅದಕ್ಕಿಂತ ಹೆಚ್ಚು ಅವಧಿ ಕೂರುವುದಾದರೆ ಗಂಟೆಗೆ 10 ರೂ. ಶುಲ್ಕವನ್ನು ಸರ್ಕಾರ ನಿಗದಿಪಡಿಸಿತ್ತು. ಹಾಸನದ ಡಿಜಿಟಲ್ ಗ್ರಂಥಾಲಯದಲ್ಲಿ 100 ಕ್ಕೂ ಹೆಚ್ಚು ಜನರು ಸದಸ್ಯತ್ವ ಪಡೆದಿದ್ದಾರೆ. ಆದರೆ ಕಳೆದ ಒಂದು ವರ್ಷದಿಂದ ಅವರು ಓದುವ ಅವಕಾಶವನ್ನೇ ಕಳೆದುಕೊಂಡಿದ್ದಾರೆ. ಈ ಬಗ್ಗೆ ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಎಲ್ಲಾ ಜಿಲ್ಲೆಗಳಲ್ಲೂ ಡಿಜಿಟಲ್ ಗ್ರಂಥಾಲಯಕ್ಕೆ ಅಂಕುಶ ಬಿದ್ದಿದೆ ಎಂದು ಗ್ರಂಥಾಲಯ ನೌಕರರೊಬ್ಬರು ಹೇಳಿದರು.

**ಪುಸ್ತಕ ತಿರುವಳಿಗೆ ಆನ್‌ಲೈನ್ ಸ್ಪರ್ಶ**

ಇನ್ನು ಜಿಲ್ಲಾ ಗ್ರಂಥಾಲಯದಲ್ಲಿ ಸದಸ್ಯತ್ವ ಪಡೆದವರಿಗೆ ಪುಸ್ತಕ ನೀಡುವ ಪದ್ಧತಿ ಮುಂದುವರಿದಿದ್ದು, ಇಷ್ಟು ದಿವಸ ಬರಹ ರೂಪದಲ್ಲಿ ದಾಖಲಾಗುತ್ತಿದ್ದ ಪುಸ್ತಕ ತಿರುವಳಿಯನ್ನು ಆನ್‌ಲೈನ್‌ನಲ್ಲಿ ದಾಖಲಿಸಲಾಗುತ್ತಿದೆ. ನಗರ ಕೇಂದ್ರ ಗ್ರಂಥಾಲಯದಲ್ಲಿ ಒಟ್ಟು 2.50 ಲಕ್ಷ ಪುಸ್ತಕಗಳಿದ್ದು, ಸದಸ್ಯತ್ವ ಹೊಂದಿರುವ 14 ಸಾವಿರ ಜನರು ಪುಸ್ತಕ ಪಡೆಯಬಹುದು. ಅದನ್ನು ನಿಗದಿತ ಸಮಯಕ್ಕೆ ಮರಳಿಸದಿದ್ದರೆ ಆನ್‌ಲೈನ್‌ಲ್ಲಿ ಎಚ್ಚರಿಕೆ ಸಂದೇಶ ಬರುತ್ತದೆ. ಮೊದಲೆಲ್ಲಾ ದಾಖಲಾತಿ ಪುಸ್ತಕದಲ್ಲಿ ಅದನ್ನು ಬರೆಯಲಾಗುತ್ತಿತ್ತು. ಈಗ ಆನ್‌ಲೈನ್ ಆಗಿರುವುದರಿಂದ ಪುಸ್ತಕ ಪಡೆದವರ ವಿವರ ಎಲ್ಲವೂ ಕ್ಷಣ ಮಾತ್ರದಲ್ಲಿ ಲಭ್ಯವಾಗುತ್ತಿದೆ. ಹೀಗಾಗಿ ಪುಸ್ತಕ ಪಡೆದು ವಾಪಾಸ್ ಕೊಡದೇ ಇರುವವರ ಸಂಖ್ಯೆ ಕಡಿಮೆಯಾಗಿದೆ.

**ಕಟ್ಟಡ ಕಾಮಗಾರಿಗೆ ಬೇಕಿದೆ 75 ಲ.ರೂ.**

ನೂತನ ಗ್ರಂಥಾಲಯ ಕಟ್ಟಡ ಕಾಮಗಾರಿ ಅರ್ಧಕ್ಕೆ ನಿಂತಿದ್ದು, ಬಾಕಿ 75 ಲ.ರೂ. ಅನುದಾನ ಲಭ್ಯವಾಗದೆ ಭಾರೀ ಸಮಸ್ಯೆಯಾಗಿದೆ. ಬಿಜೆಪಿ ಸರ್ಕಾರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಜೆ.ಮಾಧುಸ್ವಾಮಿ ಅವರು ಕಟ್ಟಡಕ್ಕೆ ಭೂಮಿಪೂಜೆ ನೆರವೇರಿಸಿದ್ದರು. ಪೂರ್ತಿ ಅನುದಾನ ಬಿಡುಗಡೆಯಾಗದೆ ಕೆಲಸ ಅರ್ಧಕ್ಕೆ ನಿಂತಿದ್ದು, ಪುಂಡ ಪೋಕರಿಗಳ ತಾಣವಾಗಿ ಮಾರ್ಪಟ್ಟಿದೆ. ಬಾಕಿ ಹಣಕ್ಕಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗು ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ.

## ಟಿಇಟಿ ನಿಯಮಾವಳಿಗೆ ಶಿಕ್ಷಕರ ವಿರೋಧ



• ಪ್ರಜೋದಯ ವರದಿ

**ಹಾಸನ :** ಸುಪ್ರೀಂಕೋರ್ಟ್ ಆದೇಶದನ್ವಯ ಜಾರಿಗೊಳಿಸಿರುವ ಟೀಚರ್ ಎಲಿಜಿಬಿಲಿಟಿ ಟೆಸ್ಟ್ (ಟಿ.ಇ.ಟಿ.) ನಿಯಮಾವಳಿಗೆ ವಿರೋಧ ವ್ಯಕ್ತಪಡಿಸಿ ಪ್ರಾಥಮಿಕ ಶಾಲಾ ಶಿಕ್ಷಕರು ಕಪ್ಪುಪಟ್ಟಿ ಧರಿಸಿ ನಗರದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಎದುರು ಸಾಂಕೇತಿಕ ಪ್ರತಿಭಟನೆ ನಡೆಸಿದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷೆ ಚೈತ್ರ ನಾಯಕರಹಳ್ಳಿ ಅವರು ಮಾತನಾಡಿ, ಕಳೆದ 25 ರಿಂದ 30 ವರ್ಷ ಸೇವೆ ಸಲ್ಲಿಸಿರುವ ಶಿಕ್ಷಕರಿಗೂ ಸಹ ಟಿ.ಇ.ಟಿ. ಪರೀಕ್ಷೆಯನ್ನು ಅನ್ವಯಿಸುವ ಆದೇಶ ಅನ್ಯಾಯಕಾರಿಯಾಗಿದೆ. ಈ ಹಿನ್ನಲೆ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸುವಂತೆ ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರ್, ಗೌರವಾಧ್ಯಕ್ಷ ನಾಗೇಶ್ ಹಾಗು ಕಾರ್ಯದರ್ಶಿ ಚೇತನ್ ಅವರ ಸೂಚನೆಯಂತೆ ರಾಜ್ಯದಾದ್ಯಂತ ಶಿಕ್ಷಕರು ಪ್ರತಿಭಟನೆ ನಡೆಸುತ್ತಿದ್ದಾರೆಂದು ತಿಳಿಸಿದರು.

ವಿದ್ಯಾರ್ಥಿಗಳ ಪಾಠ ಬೋಧನೆಗೆ ತೊಂದರೆ ಆಗದಂತೆ ಶಾಲಾ ವೇಳೆಯಲ್ಲಿಯೇ ಕಪ್ಪುಪಟ್ಟಿ ಧರಿಸಿ ಸಾಂಕೇತಿಕವಾಗಿ ವಿರೋಧ ವ್ಯಕ್ತಪಡಿಸಲಾಗುತ್ತಿದೆ. ಕೇಂದ್ರ ಸರ್ಕಾರದ ಗಮನ ಸೆಳೆಯುವ ಉದ್ದೇಶದಿಂದ ಈಗಾಗಲೇ ದೆಹಲಿಯ ಜಂತರ್-ಮಂತರ್‌ನಲ್ಲಿ ರಾಜ್ಯದ ಎಲ್ಲಾ ಶಿಕ್ಷಕರು ಟಿಇಟಿ ವಿರೋಧಿಸಿ ಬೃಹತ್ ಪ್ರತಿಭಟನೆ ನಡೆಸಿದ್ದರು. ಅದರ ಮುಂದುವರಿದ ಭಾಗವಾಗಿ ಗುರುವಾರ ಶಿಕ್ಷಕರು ಕಪ್ಪುಪಟ್ಟಿ ಧರಿಸಿ ಶಾಲೆಗೆ ಆಗಮಿಸಿದ್ದಾರೆಂದರು.

25 ರಿಂದ 30 ವರ್ಷ ಸೇವೆ ಸಲ್ಲಿಸಿದ ಶಿಕ್ಷಕರ ಸೇವೆಯನ್ನು ಪರಿಗಣಿಸಬೇಕು, ಟಿಇಟಿ ನಿಯಮವನ್ನು ಹಿಂತೆಗೆದುಕೊಳ್ಳಬೇಕೆಂದು ರಾಜ್ಯ ಮತ್ತು ಕೇಂದ್ರ ಸರ್ಕಾರಗಳನ್ನು ಆಗ್ರಹಿಸಿದರು. ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾ ಕ್ರೀಡಾ ಕಾರ್ಯದರ್ಶಿ

# ಸಿನಿ ಪ್ರಜಾ

## ಲಕ್ಷ್ಮಿ ಪುತ್ರನಿಗೆ ಸಿಕ್ಕರು ನಾಯಕಿ ಚಿಕ್ಕಣ್ಣನಿಗೆ ಜೋಡಿ ಯಾರು?



ನ್ಯಾಚುರಲ್ ಸ್ಟಾರ್ ಚಿಕ್ಕಣ್ಣ ಹೀರೋ ಆಗಿ ನಟಿಸುತ್ತಿರುವ ಎರಡನೇ ಸಿನಿಮಾ ಲಕ್ಷ್ಮಿಪುತ್ರ. ಎಪಿ ಅರ್ಜುನ್ ಫಿಲ್ಮ್ ಬ್ಯಾನರ್‌ನಡಿ ಮೂಡಿ ಬರುತ್ತಿರುವ ಈ ಚಿತ್ರಕ್ಕೆ ವಿಜಯ್ ಸ್ವಾಮಿ ಆಕ್ಷನ್ ಕಟ್ ಹೇಳ್ತಿದ್ದಾರೆ. ಲಕ್ಷ್ಮಿ ಪುತ್ರ ಸಿನಿಮಾದ ಬಹುತೇಕ ಚಿತ್ರೀಕರಣ ಈಗಾಗಲೇ ಮುಕ್ತಾಯಗೊಂಡಿದೆ. ಹೀಗಿದ್ದರೂ ಚಿತ್ರತಂಡ ನಾಯಕಿ ಪರಿಚಯ ಮಾಡಿರಲಿಲ್ಲ. ಇದೀಗ ಲಕ್ಷ್ಮಿಪುತ್ರನಿಗೆ ಜೋಡಿ ಯಾರು ಅನ್ನೋದು ರಿವೀಲ್ ಆಗಿದೆ.

ಲಕ್ಷ್ಮಿಪುತ್ರ, ಚಿಕ್ಕಣ್ಣನಿಗೆ ಹೊಸ ನಟಿ ನಾಯಕಿಯಾಗಿ ಸಾಥ್ ಕೊಡುತ್ತಿದ್ದಾರೆ. ಅವರೇ ವಂದಿತಾ. ಚಿಕ್ಕಣ್ಣನಿಗೆ ಜೋಡಿಯಾಗಿ ವಂದಿತಾ ಅಭಿನಯಿಸಲಿದ್ದಾರೆ. ಸ್ಪೆಷಲ್ ಪ್ರೋಮೋ ಬಿಡುಗಡೆ ಮಾಡಿರುವ ಚಿತ್ರತಂಡ ವಂದಿತಾ ಅವರನ್ನು ತಮ್ಮ ಬಳಗಕ್ಕೆ ಸ್ವಾಗತ ಮಾಡಿಕೊಂಡಿದೆ.

ಚಿತ್ರದಲ್ಲಿ ತಾರಾ, ಕುರಿ ಪ್ರತಾಪ್, ಧರ್ಮಣ್ಣ ಸೇರಿ ದೊಡ್ಡ ತಾರಾಗಣವಿದೆ. ಅರ್ಜುನ್ ಜನ್ಯಾ ಸಂಗೀತ ಚಿತ್ರಕ್ಕಿದ್ದು, ಎ.ಪಿ ಅರ್ಜುನ್ ಚಿತ್ರದ ಹಾಡುಗಳಿಗೆ ಸಾಹಿತ್ಯ ಬರೆಯುತ್ತಿದ್ದಾರೆ. ಚಿತ್ರದಲ್ಲಿ ತಾಯಿ, ಮಗನ ಬಾಂಧವ್ಯದ ಕಥೆಯನ್ನು ಹೇಳಲಾಗ್ತಿದೆ.

ಎಪಿ ಅರ್ಜುನ್ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ನಿರ್ದೇಶಕ ಎಪಿ ಅರ್ಜುನ್ ಪತ್ನಿ ಅನ್ನಪೂರ್ಣ ಅರ್ಜುನ್ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಈ ಚಿತ್ರವನ್ನು ರವಿಕಿರಣ್ ಗೌಡ ಸಹ-ನಿರ್ಮಾಣದಲ್ಲಿ ಸಾಥ್ ಕೊಡುತ್ತಿದ್ದಾರೆ. ಚಿತ್ರದ ಆ್ಯಕ್ಷನ್ ಸೀಕ್ವೆನ್ಸ್‌ಗಳಿಗೆ ಮಾಸ್ ಮಾದ ನಿರ್ದೇಶನ ಮಾಡಿದ್ದಾರೆ. ಗಿರೀಶ್ ಆರ್ ಗೌಡ ಅವರ ಛಾಯಾಗ್ರಹಣ ಚಿತ್ರಕ್ಕಿದೆ.

## ಡಬಲ್ ನಿರೀಕ್ಷೆಯಲ್ಲಿ ಸ್ಯಾಂಡಲ್‌ವುಡ್ ನಟರು!

### ಮುಂದಿನ ವರ್ಷಕ್ಕೆ ಎರಡು ಸಿನಿಮಾಗಳು ತೆರೆ ಮೇಲೆ ಸಿದ್ಧರಾದ ಕಲಾವಿದರು

**ಪ್ರಮುಖ ಮುಖ್ಯಾಂಶಗಳು**

- ಈ ವರ್ಷ ಒಬ್ಬ ನಟರ ಎರಡು ಸಿನಿಮಾಗಳು ರಿಲೀಸ್‌ಗೆ ತಯಾರಿ
- ಯಶ್, ಶ್ರೀಮುರಳಿ, ಧ್ರುವರಿಂದ ಡಬಲ್ ಕೊಡುಗೆ
- ಈ ವರ್ಷದಲ್ಲಿ ಸ್ಟಾರ್ ನಟರ ಸಿನಿಮಾಗಳ ಜಾತ್ರೆ



2025ರ ವರ್ಷ ಕನ್ನಡ ಚಿತ್ರರಂಗಕ್ಕೆ ಸ್ವಲ್ಪ ಮಟ್ಟಿಗೆ ಆಶಾದಾಯಕವಾಗಿತ್ತು. ಮೊದಲರ್ಧ ಖ್ಯಾತ ನಟರ ಯಾವುದೇ ಸಿನಿಮಾಗಳು ರಿಲೀಸ್ ಆಗಲಿಲ್ಲವಾದರೂ, ದ್ವಿತೀಯಾರ್ಧದಲ್ಲಿ ಶಿವರಾಜಕುಮಾರ್, ದರ್ಶನ್, ಸುದೀಪ್, ಉಪೇಂದ್ರ, ರಿಷಬ್ ಶೆಟ್ಟಿ ಸೇರಿ ಬೆರಳಣಿಕೆಯಷ್ಟು ಕಲಾವಿದರು ತೆರೆ ಮೇಲೆ ಮಿಂಚಿದರು. ಆದರೆ, ಇವರು ಹೊರತುಪಡಿಸಿ ಇನ್ನು ಹಲವರು ಈ ಬಾರಿ ತೆರೆ ಮೇಲೆ ಕಾಣಿಸಿಕೊಳ್ಳಲಿಲ್ಲ. ಆಗಂಥ, ಅವರು ಸುಮ್ಮನೇ ಕುಳಿತಿಲ್ಲ. 2026ಕ್ಕೆ ಎರಡು ಸಿನಿಮಾಗಳು ರಿಲೀಸ್ ಮಾಡುವ ತಯಾರಿಯಲ್ಲಿದ್ದು, ಅದಕ್ಕಾಗಿ ನಿರಂತರ ಶೂಟಿಂಗ್‌ನಲ್ಲಿದ್ದಾರೆ. ಮುಂದಿನ ವರ್ಷಕ್ಕೆ ಅಭಿಮಾನಿಗಳಿಗೆ ಡಬಲ್ ಖುಷಿ ನೀಡಲು ಸಿದ್ಧರಾಗುತ್ತಿದ್ದಾರೆ.

**ಯಶಸ್ಸಿನ ದ್ವಿಗುಣ:** ನಟ ಯಶ್ ಕೆಜಿಎಫ್ ಸರಣಿ ಬಳಿಕ ಮತ್ತೇ ತೆರೆ ಮೇಲೆ ಕಾಣಿಸಿಕೊಂಡಿಲ್ಲ. ಸದ್ಯ ಅವರು ಪ್ಯಾನ್ ವರ್ಲ್ಡ್ ಟಾಕ್ಸಿಕ್ ಶೂಟಿಂಗ್‌ನಲ್ಲಿ ಬಿಜಿಯಾಗಿದ್ದಾರೆ. ಈ ಸಿನಿಮಾ ಇದೇ ಮಾ.19ಕ್ಕೆ ರಿಲೀಸ್ ಆಗಲಿದೆ. ಈ ಚಿತ್ರದ ಮೂಲಕ ತುಂಬಾ ದಿನಗಳ ಬಳಿಕ ಯಶ್ ತೆರೆ ಮೇಲೆ ಮಿಂಚಲಿದ್ದಾರೆ. ಟಾಕ್ಸಿಕ್ ಬಳಿಕ ಮುಂದಿನ ದೀಪಾವಳಿಗೆ ಮತ್ತೊಂದು ಪ್ಯಾನ್ ವರ್ಲ್ಡ್ ಸಿನಿಮಾ ರಾಮಾಯಣ ಭಾಗ 1 ಬಿಡುಗಡೆಯಾಗಲಿದೆ. ಈ ಹಿನ್ನೆಲೆಯಲ್ಲಿ ಯಶ್ ಅಭಿಮಾನಿಗಳಿಗೆ 2026 ಡಬಲ್ ಧಮಾಕಾದ ವರ್ಷ.

**ಶ್ರೀಮುರಳಿಯ ಎರಡು ಸಿನಿಮಾಗಳು:** ಕಳೆದ ವರ್ಷ ಬಘೀರದ ಮೂಲಕ ಕಾಣಿಸಿಕೊಂಡಿದ್ದ ನಟ ಶ್ರೀಮುರಳಿ ಈ ವರ್ಷ ತೆರೆ ಮೇಲೆ ಬರಲಿಲ್ಲ. ಸದ್ಯ ಅವರು ಉಗ್ರಾಯುಧಮ್ ಹಾಗೂ ಪರಾಕ್ ಎರಡು ಸಿನಿಮಾಗಳಲ್ಲಿ ಒಟ್ಟಿಗೆ ನಟಿಸುತ್ತಿದ್ದು, ಮುಂದಿನ ವರ್ಷಕ್ಕೆ ಈ ಎರಡು ಸಿನಿಮಾಗಳು ತೆರೆ ಮೇಲೆ ತರಬೇಕು ಎಂಬ ನಿರೀಕ್ಷೆಯಲ್ಲಿದ್ದಾರೆ. ಅದಕ್ಕಾಗಿ ಅವರು ನಿರಂತರ ಶೂಟಿಂಗ್‌ನಲ್ಲಿ ತೊಡಗಿಕೊಂಡಿದ್ದಾರೆ.

**ಧ್ರುವನ ಎರಡು ಅವತಾರಗಳು:** ನಟ ಧ್ರುವ ಸರ್ಜಾ ಮುಂದಿನ ವರ್ಷ ಎರಡು ಅವತಾರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈಗಾಗಲೇ ಶೂಟಿಂಗ್ ಪೂರ್ಣಗೊಳಿಸಿರುವ ಪ್ರೇಮ್ ನಿರ್ದೇಶನದ ಕೆಡಿ ಚಿತ್ರವು ಏ.30ಕ್ಕೆ ರಿಲೀಸ್ ಆಗಲಿದೆ. ಈ ಮಧ್ಯೆ, ಧುವ ಸರ್ಜಾ ಕ್ರಿಮಿನಲ್ ಚಿತ್ರ ಘೋಷಿಸಿದ್ದಾರೆ. ಎಷ್ಟೇ ಕಷ್ಟವಾದರೂ ಮುಂದಿನ ವರ್ಷಕ್ಕೆ ಕ್ರಿಮಿನಲ್ ರಿಲೀಸ್ ಮಾಡಲೇಬೇಕೆಂದು ಧ್ರುವ ಸರ್ಜಾ ಒಂದೇ ಹಂತದಲ್ಲಿ ಈ ಚಿತ್ರದ ಶೂಟಿಂಗ್ ಪೂರ್ಣಗೊಳಿಸಲು ಮುಂದಾಗಿದ್ದಾರೆ. ಮೊದಲರ್ಧದಲ್ಲಿ ಕೆಡಿ ಬಂದರೆ, ದ್ವಿತೀಯಾರ್ಧದಲ್ಲಿ ಧ್ರುವ ಸರ್ಜಾ ಅಭಿಮಾನಿಗಳು ಕ್ರಿಮಿನಲ್ ನಿರೀಕ್ಷಿಸ ಬಹುದು.

**ಗಣೇಶನ ಡಬಲ್ ಸಂಭ್ರಮ:** ಕೃಷ್ಣಂ ಪ್ರಣಯ ಸಖಿ ಬಳಿಕ ನಟ ಗಣೇಶ್ ನಾಲ್ಕು ಚಿತ್ರಗಳನ್ನು ಘೋಷಿಸಿದ್ದರೂ ಈ ವರ್ಷ ಯಾವುದು ತೆರೆ ಕಾಣಲಿಲ್ಲ. ಸದ್ಯ ಅವರು ನಿರಂತರ ಶೂಟಿಂಗ್‌ನಲ್ಲಿದ್ದು, ಮುಂದಿನ ವರ್ಷಕ್ಕೆ ರಮೇಶ್ ಅರವಿಂದ್ ಕಾಂಬಿನೇಷನ್‌ನಲ್ಲಿ ಮೂಡಿಬರುತ್ತಿರುವ ಯುವರ್ಸ್ ಸಿನ್ಸಿಯರ್ಲಿ ರಾಮ್ ಹಾಗೂ ಶ್ರೀನಿವಾಸರಾಜು ಕಾಂಬಿನೇಷನ್‌ನ ಇನ್ನು ಹೆಸರಿಡದ ಚಿತ್ರವನ್ನು ತೆರೆ ಮೇಲೆ ತರುವ ಸಾಧ್ಯತೆ ಹೆಚ್ಚಿದೆ. ಈ ಹಿನ್ನೆಲೆಯಲ್ಲಿ ಮುಂದಿನ ವರ್ಷ ಗಣೇಶ್ ಅಭಿಮಾನಿಗಳಿಗೆ ಡಬಲ್ ಸಂಭ್ರಮದ ಖುಷಿ. ಇನ್ನು ಪಿನಾಕ 2026ಕ್ಕೆ ಶೂಟಿಂಗ್ ಪೂರ್ಣಗೊಳಿಸಿದರೂ, ಪೋಸ್ಟ್-ಪ್ರೊಡಕ್ಷನ್ ವಿಳಂಬವಾಗುವ ಕಾರಣ ಮುಂದಿನ ವರ್ಷಕ್ಕೆ ಬರುವುದು ಕಷ್ಟ ಎನ್ನಲಾಗುತ್ತಿದೆ. ಇನ್ನು ನಟ ರಮೇಶ್ ಅರವಿಂದ್ ಯುವರ್ಸ್ ಸಿನ್ಸಿಯರ್ಲಿ ರಾಮ್ ಜತೆಗೆ ದೈಜಿ ಮೂಲಕ ತೆರೆ ಮೇಲೆ ಸಿದ್ಧರಾಗುತ್ತಿದ್ದಾರೆ.

**ಈ ವರ್ಷ ಬಂದವರೂ, ಮುಂದಿನ ವರ್ಷಕ್ಕೂ ಬರುತ್ತಾರೆ!:** ಶಿವರಾಜಕುಮಾರ್, ಉಪೇಂದ್ರ, ಸುದೀಪ್ ಹಾಗೂ ರಾಜ್ ಬಿ. ಶೆಟ್ಟಿ ಸೇರಿ ಹಲವರು ಈ ವರ್ಷ ತೆರೆ ಮೇಲೆ ಬಂದಿದ್ದರು. ಅವರು ಕೂಡ ಮುಂದಿನ ವರ್ಷಕ್ಕೆ ಎರಡು ಸಿನಿಮಾಗಳು ನೀಡಬೇಕು ಎನ್ನುವ ತವಕದಲ್ಲಿದ್ದಾರೆ. ಸದ್ಯ ಶಿವಣ್ಣ ಡ್ಯಾಡ್ ಶೂಟಿಂಗ್, ಈ ಚಿತ್ರವನ್ನು ನಿರೀಕ್ಷಿಸಬಹುದು. ಜತೆಗೆ ಹೇಮಂತ್ ರಾವ್ ನಿರ್ದೇಶನದ 666 ಆಪರೇಷನ್ ಡ್ರೀಮ್ ಥಿಯೇಟರ್ ತೆರೆ ಮೇಲೆ ಬರುವ ಸಾಧ್ಯತೆಯಿದೆ. ಮಾರ್ಕ್ ಮೂಲಕ ವೇಗವಾಗಿ ಚಿತ್ರೀಕರಣ ಮುಗಿಸಿ, ತೆರೆ ಮೇಲೆ ಬಂದಿದ್ದ ಸುದೀಪ್ ಅದೇ ವೇಗದಲ್ಲಿ 2026ಕ್ಕೆ ಎರಡು ಸಿನಿಮಾಗಳು ಮುಗಿಸಬೇಕು ಎಂದುಕೊಂಡಿದ್ದಾರೆ. ತೆಲುಗು ನಿರ್ದೇಶಕ ಸು ಕುಮಾರ್ ತಂಡದ ಹೊಸ ನಿರ್ದೇಶಕನ ರೊಮ್ಯಾಂಟಿಕ್-ಕಾಮಿಡಿ ಜಾನರ್‌ನ ಚಿತ್ರ ಸೇರಿ ಬಿಲ್ಲಾ ರಂಗ ಬಾಷಾ ತೆರೆ ಮೇಲೆ ತರಬೇಕು ಎಂದು ಪಣತೊಟ್ಟಿದ್ದಾರೆ. ಇನ್ನು ಉಪೇಂದ್ರ ಅಭಿನಯದ ಭಾರ್ಗವ, ದ ನೆಕ್ಸ್ಟ್ ಲೆವೆಲ್ ಹಾಗೂ ದುನಿಯಾ ವಿಜಯ್ ಅವರ ಲ್ಯಾಂಡ್‌ಲಾರ್ಡ್, ನೀನಾಸಂ ಸತೀಶ್‌ರ ದ ರೈಸ್ ಆಫ್ ಅಶೋಕ ಹಾಗೂ ಅಯೋಗ್ಯ-2 ಸೇರಿ ಹಲವರ ಬಹುನಿರೀಕ್ಷಿತ ಸಿನಿಮಾಗಳ ಮೇಲೆ ನಿರೀಕ್ಷೆಯಿಟ್ಟುಕೊಳ್ಳಬಹುದು.



## 09-01-2026 ದಿನ ಭವಿಷ್ಯ

**ಮೇಷ:** ನಿಮ್ಮ ಹೆಚ್ಚು ಆತ್ಮವಿಶ್ವಾಸವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಒತ್ತಡದ ದಿನದ ಹೊರತಾಗಿಯೂ ನೀವು ನಿಮ್ಮ ಚೈತನ್ಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ - ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ಬಾಕಿಯಿರುವ ಮನೆಕೆಲಸಗಳು ನಿಮ್ಮ ಸ್ವಲ್ಪ ಸಮಯ ತೆಗೆದುಕೊಳ್ಳುತ್ತವೆ.

**ವೃಷಭ:** ವಿಶೇಷವಾಗಿ ಬಿಕ್ಕಟ್ಟಿನ ಸಮಯದಲ್ಲಿ ನಿಮ್ಮ ತಾಳ್ಮೆ ಕಳೆದುಕೊಳ್ಳಬೇಡಿ. ಊಹೆಗಳು ಲಾಭ ತರುತ್ತವೆ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ. ಹರ್ಷಚಿತ್ತದಿಂದಿರಿ ಹಾಗೂ ಪ್ರೀತಿಯಲ್ಲಿನ ಏಳುಬೀಳುಗಳನ್ನು ಎದುರಿಸುವ ಧೈರ್ಯ ಹೊಂದಿರಿ.

**ಮಿಥುನ:** ವಿಶೇಷವಾಗಿ ತಿರುವುಗಳಲ್ಲಿ ವಾಹನ ಚಾಲನೆ ಮಾಡುವಾಗ ಎಚ್ಚರಿಕೆಯಿಂದಿರಿ. ಬೇರೆಯವರ ಉದಾಸೀನತೆ ನಿಮಗೆ ಸಮಸ್ಯೆಗಳನ್ನು ಉಂಟುಮಾಡಬಹುದು. ನೀವು ಇಂದು ನಿಮಗೆ ನೀಡಲಾದ ಹೂಡಿಕೆಯ ಯೋಜನೆಗಳ ಬಗ್ಗೆ ಚೆನ್ನಾಗಿ ಆಲೋಚಿಸಬೇಕು. ಮನೆ ಅಥವಾ ಸಾಮಾಜಿಕ ಸಮಾರಂಭಗಳಲ್ಲಿನ ಒಂದು ದುರಸ್ತಿ ಕೆಲಸ ನಿಮ್ಮನ್ನು ವ್ಯಸ್ತವಾಗಿರಿಸುವ ಸಾಧ್ಯತೆಯಿದೆ.

**ಕರ್ಕಾಟಕ:** ಸಂಜೆಯಲ್ಲಿ ವಿಶ್ರಾಂತಿ ತೆಗೆದುಕೊಳ್ಳಿ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ನಿಮ್ಮ ಸಮಸ್ಯೆಗಳನ್ನು ಮರೆತು ಕುಟುಂಬದ ಸದಸ್ಯರೊಂದಿಗೆ ಒಳ್ಳೆಯ ಸಮಯ ಕಳೆಯುತ್ತೀರಿ. ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ.

**ಸಿಂಹ:** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು, ನೀವು ಅವರ ಮಾತುಗಳನ್ನು ಬಹಳ ಗಮನವಾಗಿ ಕೇಳಬೇಕಾದ ಅಗತ್ಯವಿದೆ.

**ಕನ್ಯಾ:** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು, ಆದ್ದರಿಂದ ಇಂದು ನೀವು ನಿಮ್ಮ ವಸ್ತುವನ್ನು ಎಚ್ಚರಿಕೆಯಿಂದ ಇಟ್ಟುಕೊಳ್ಳಬೇಕು. ಧೃತಿಗೆಡಬೇಡಿ- ವೈಫಲ್ಯಗಳು ಸಹಜ ಅವುಗಳು ಜೀವನದ ಸೌಂದರ್ಯವಾಗಿವೆ.

**ತುಲಾ:** ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಹಳೆಯ ಸಂಬಂಧಿಗಳು ಅವಿವೇಕದ ಬೇಡಿಕೆಗಳನ್ನು ಮಾಡುವ ಸಾಧ್ಯತೆಯಿದೆ.

**ವೃಶ್ಚಿಕ:** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷ ಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ತೀರಾ ಖರ್ಚು ಮಾಡುವ ಮತ್ತು ಮನರಂಜನೆಗೆ ತುಂಬಾ ಖರ್ಚು ಮಾಡುವ ನಿಮ್ಮ ಪ್ರವೃತ್ತಿಗೆ ಕಡಿವಾಣ ಹಾಕಿ. ಹಗಲುಗನಸು ನಿಮ್ಮ ಪತನಕ್ಕೆ ಕಾರಣವಾಗುತ್ತದೆ - ಇತರರು ನಿಮ್ಮ ಕೆಲಸ ಮಾಡುತ್ತಾರೆಂದು ನಿರೀಕ್ಷಿಸಬೇಡಿ.

**ಧನು:** ಇಂದು ಕೈಗೊಂಡ ಧರ್ಮಾರ್ಥ ಕಾರ್ಯವು ಮಾನಸಿಕ ಶಾಂತಿ ಮತ್ತು ಆರಾಮ ತರುತ್ತದೆ. ಮನೆಯ ಅಗತ್ಯವಾದ ವಸ್ತುಗಾಲ ಮೇಲೆ ಹಣವನ್ನು ಖರ್ಚು ಮಾಡುವುದು ಖಂಡಿತವಾಗಿಯೂ ನಿಮಗೆ ಆರ್ಥಿಕ ತೊಂದರೆಗಳನ್ನು ನೀಡುತ್ತದೆ ಆದರೆ ಇದರಿಂದ ನೀವು ಭವಿಷ್ಯದ ಅನೇಕ ತೊಂದರೆಗಳಿಂದ ತಪ್ಪಿಸಿಕೊಳ್ಳಬಹುದು. ಒತ್ತಡದ ಅವಧಿಯಿದ್ದರೂ ಕುಟುಂಬದ ಬೆಂಬಲ ನಿಮಗೆ ಸಹಾಯ ಮಾಡುತ್ತದೆ.

**ಮಕರ:** ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ - ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ಸಂತೋಷವಾಗಿರಿಸಲು ಕೆಲಸಗಳನ್ನು ಮಾಡುತ್ತಾರೆ.

**ಕುಂಭ:** ನಿಮ್ಮ ಹಠಾತ್ ಮತ್ತು ಹಠಮಾರಿ ಪ್ರವೃತ್ತಿಯನ್ನು ವಿಶೇಷವಾಗಿ ಪಾರ್ಟಿಗಳಲ್ಲಿ ನಿಯಂತ್ರಿಸಲು ಪ್ರಯತ್ನಿಸಿ ಏಕೆಂದರೆ ಇದು ಪಕ್ಷದ ಮೂಡ್ ಹಾಳು ಮಾಡಬಹುದು. ನೀವು ಯಾರನ್ನಾದರೂ ಮರಳಿ ಎರವಲು ಕೇಳುತ್ತಿದ್ದರೆ ಮತ್ತು ಇಲ್ಲಿಯವರೆಗೆ ಅವರು ನಿಮ್ಮ ಮಾತನ್ನು ತಪ್ಪಿಸುತ್ತಿದ್ದರೆ, ಇಂದು ಅವರು ಮಾತನಾಡದೆ ಹಣವನ್ನು ನಿಮಗೆ ಹಿಂದಿರುಗಿಸಬಹುದು.

**ಮೀನ:** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಜೀವನ ಸಂಗಾತಿಯೊಂದಿಗೆ ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಜಗಳವಾಗುವ ಸಾಧ್ಯತೆ ಇದೆ. ನಿಮ್ಮ ಸಂಗಾತಿಗಳು ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ.

## ಕನ್ನಡದ ಮತ್ತೊಂದು ಸಿನಿಮಾ ಕರಿಕಾಡ ಪ್ಯಾನ್ ಇಂಡಿಯಾ ರಿಲೀಸ್; ಏನಿದರ ವಿಶೇಷ

ಕನ್ನಡ ಚಿತ್ರರಂಗದಲ್ಲಿ ಒಂದಲ್ಲ ಒಂದು ಹೊಸ ಪ್ರಯತ್ನಗಳನ್ನು ಮಾಡುತ್ತಲೇ ಇರುತ್ತಾರೆ. ಅದರಲ್ಲೂ ಯುವ ಪ್ರತಿಭೆಗಳು ಹೊಸ ಹೊಸ ಸಾಹಸಕ್ಕೆ ಕೈ ಹಾಕುತ್ತಿದ್ದಾರೆ. ಇಂತಹದ್ದೇ ಒಂದು ಸಿನಿಮಾ ಕರಿಕಾಡ. ಇದು ಕನ್ನಡದಲ್ಲಿ ನಿರ್ಮಾಣ ಆಗಿದ್ದು, ಪಂಚಭಾಷೆಯಲ್ಲಿ ಬಿಡುಗಡೆಯಾಗುವುದಕ್ಕೆ ಸಜ್ಜಾಗಿದೆ.

ಕರಿಕಾಡ ಟೈಟಲ್‌ನಿಂದಲೇ ಗಮನ ಸೆಳೆಯುತ್ತಿರುವ ಈ ಸಿನಿಮಾ ಕೂಡ ಅಷ್ಟೇ ವಿಭಿನ್ನಾವಾಗಿದೆ. ಇದೊಂದು ಮ್ಯೂಸಿಕಲ್ ಜರ್ನಿಯ ಜೊತೆಗೆ ಅಡ್ವೆಂಚರಸ್ ಎಲಿಮೆಂಟ್ ಇಟ್ಟುಕೊಂಡು ಮಾಡಿರುವ ಸಿನಿಮಾ. ಮೂರು ತಿಂಗಳ ಹಿಂದೆ ಟೈಟಲ್ ಟೀಸರ್ ರಿಲೀಸ್ ಮಾಡಿ ಕರಿಕಾಡ ಚಿತ್ರತಂಡ ಸದ್ದು ಮಾಡಿತ್ತು. ಇದೀಗ ಅಧಿಕೃತ ಟೀಸರ್ ರಿಲೀಸ್ ಮಾಡಿ ಗಮನ ಸೆಳೆದಿದೆ.


ಯುವ ಪ್ರತಿಭೆಗಳ ಕರಿಕಾಡ ಸಿನಿಮಾದ ಟೀಸರ್ ಹೊಸ ಭರವಸೆ ಹುಟ್ಟಿಸಿದೆ. ಸಾಹಸಮ ದೃಶ್ಯಕಾವ್ಯವಾಗಿ, ಪ್ರೇಮಕಥೆಯ ರೂಪಕವಾಗಿ, ನಮ್ಮ ಮಣ್ಣಿನ ಸೊಗಡನ್ನ ಸೂಸುವಂತಹ ಕಥಾಹಂದರ ಹೊಂದಿದೆ. ಇಷ್ಟೇ ಅಲ್ಲದೆ ಇದೊಂದು ರಿವೇಂಜ್ ಸ್ಟೋರಿಯಂತೆ ಎದ್ದು ಕಾಣುತ್ತಿದೆ. ಇಷ್ಟೇ ಅಲ್ಲದೆ ಸಿನಿಮಾ ಕಥೆಯ ಜೊತೆಗೆ ತಾಂತ್ರಿಕತೆಯಲ್ಲಿಯೂ ಗಮನ ಸೆಳೆದಿದೆ.

ಈ ಸಿನಿಮಾದಲ್ಲಿ ಕಾಡ ನಟರಾಜ್ ನಾಯಕ ನಟನಾಗಿ ನಟಿಸಿದ್ದಾರೆ. ಇವರೊಂದಿಗೆ ಪ್ರಮುಖ ಪಾತ್ರದಲ್ಲಿ ಬಲರಾಜವಾಡಿ,ಯಶ್ ಶೆಟ್ಟಿ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ತುಳು ಚಿತ್ರರಂಗದ ಚೆಲುವೆ ನಿರೀಕ್ಷಾ ಶೆಟ್ಟಿ ನಾಯಕಿಯಾಗಿದ್ದಾರೆ. ಉಳಿದಂತೆ ಈ ಸಿನಿಮಾದಲ್ಲಿ ಮಂಜು ಸ್ವಾಮಿ, ಗೋವಿಂದ ಗೌಡ , ದೀವಾಕರ್, ಕಾಮಿಡಿ ಕಿಲಾಡಿ ಸೂರ್ಯ, ದಿ.ರಾಕೇಶ್ ಪೂಜಾರಿ, ವಿಜಯ್ ಚಂಡೂರು, ಚಂದ್ರಪ್ರಭ, ಕರಿಸುಬ್ಬು, ಗಿರಿ, ಮಾಸ್ಟರ್ ಆರ್ಯನ್, ಬಾಲನಟಿ ರಿದ್ಧಿ ಸೇರಿದಂತೆ ಹಲವು ಕಲಾವಿದರು ನಟಿಸಿದ್ದಾರೆ. ಇನ್ನು ಈ ಸಿನಿಮಾವನ್ನು ರಿದ್ಧಿ ಎಂಟರ್‌ಟೈನ್ಮೆಂಟ್ಸ್ ಬ್ಯಾನರ್‌ನಲ್ಲಿ ಕಾಡ ನಟರಾಜ್ ಅವರ ಪತ್ನಿ ದೀಪ್ತಿ ದಾಮೋದರ್ ನಿರ್ಮಾಣ ಮಾಡಿದ್ದಾರೆ. ಪತಿಯ ಕನಸಿನ ಈ ಸಿನಿಮಾ ಮೂಲಕ ಈಡೇರಿಸಿದ್ದಾರೆ. ಇನ್ನು ಇವರ ಕನಸಿಗೆ ಸ್ನೇಹಿತ ರವಿಕುಮಾರ್ ಎಸ್.ಆರ್ ಸಹ ನಿರ್ಮಾಣಕ್ಕೆ ಸಾಥ್ ನೀಡಿದ್ದಾರೆ.

ಕರಿಕಾಡ ಸಿನಿಮಾವನ್ನು ಗಿಲ್ಲಿ ವೆಂಕಟೇಶ್ ನಿರ್ದೇಶನ ಮಾಡಿದ್ದಾರೆ. ಸಿನಿಮಾದ ಹೀರೋ ಕಾಡ ನಟರಾಜ ಅವರೇ ಸಿನಿಮಾಗೆ ಕಥೆ ಬರೆದಿದ್ದಾರೆ. ಅತೀಶಯ್ ಜೈನ್ ಹಾಗೂ ಶಶಾಂಕ್ ಶೇಷಾಗಿರಿ ಕಂಪೋಸ್ ಮಾಡಿದ್ದಾರೆ. ಶಶಾಂಕ್ ಶೇಷಾಗರಿ ಅವರು ರಾಗ ಸಂಯೋಜನೆ ಜೊತೆಗೆ ಜಬರ್ದಸ್ತ್ ಹಿನ್ನಲೆ ಸಂಗೀತವನ್ನ ನೀಡಿದ್ದಾರೆ. ಜೀವನ್ ಗೌಡ ಕೆಲಸ ಕ್ಯಾಮರಾವರ್ಕ್ ಇದ್ದರೆ, ದೀಪಕ್ ಸಿ.ಎಸ್ ಸಂಕಲನವಿದೆ.

ಕರಿಕಾಡ ಟೀಸರ್ ಬಿಡುಗಡೆ ಮಾಡಿದ ಚಿತ್ರತಂಡ ತಮ್ಮ ಸಿನಿಮಾದ ಬಗ್ಗೆ ಹಲವು ವಿಷಯಗಳನ್ನು ಹಂಚಿಕೊಂಡಿದ್ದಾರೆ. ಅದ್ರಲ್ಲೂ ಅಪ್ಪಟ ಕನ್ನಡಿಗರು ಮಾಡಿರೋ ಈ ಕನ್ನಡ ಸಿನಿಮಾವನ್ನ ನೋಡಿ ಬಾಲಿವುಡ್ ಫಿಲಂ ಟ್ರೇಡಸ್ ಖುದ್ದು ಈ ಸಿನಿಮಾವನ್ನು ಹಿಂದಿಯಲ್ಲಿ ಬಿಡುಗಡೆ ಮಾಡಲು ಮುಂದಾಗಿದ್ದಾರಂತೆ. ಅಲ್ಲದೇ ಕನ್ನಡ ಸಿನಿಮಾವೊಂದಕ್ಕೆ ಇಷ್ಟೊಂದು ಬ್ರ್ಯಾಂಡ್‌ಗಳೂ ಬಂದಿರೋದು ಇದೇ ಮೊದಲು ಎನ್ನುತ್ತೆ ಚಿತ್ರತಂಡ. ಮಾರ್ಕೆಟಿಂಗ್ ವಿಚಾರದಲ್ಲಿ ಕರಿಕಾಡ ಸಿನಿಮಾ ಹಲವು ಮೊದಲುಗಳಿಗೆ ಸಾಕ್ಷಿಯಾಗಲಿದೆ ಎಂದೂ ಹೇಳಿಕೊಂಡಿದೆ. ನಿರೀಕ್ಷೆ ಹುಟ್ಟಿಸಿದ ಹೊಸ ನಾಯಕ ಕಾಡ ನಟರಾಜ್ ನಟನೆಯ ಈ ಕರಿಕಾಡ ಸಿನಿಮಾ ಇದೇ ಫೆಬ್ರವರಿ 6, 2026ಕ್ಕೆ ವಿಶ್ವದಾದ್ಯಂತ 1200ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಈ ಕರಿಕಾಡ ಸಿನಿಮಾಗೆ ಕಾರ್ಪೋರೇಟ್ ಜಗತ್ತಿನ ಬ್ರ್ಯಾಂಡ್ ಸಾಥ್ ನೀಡಿದ್ದು, ಉತ್ತರ ಭಾರತದಲ್ಲಿ ಅದ್ದೂರಿಯಾಗಿ ಸಿನಿಮಾ ಬಿಡುಗಡೆ ಮಾಡುವುದಕ್ಕೆ ಸ್ಕೆಚ್ ಹಾಕಲಾಗಿದೆ.




## ಲವ್ ಮಾಕ್ಟೇಲ್ 3 ಸಿನಿಮಾ ರಿಲೀಸ್ ಡೇಟ್ ಅನೌನ್ಸ್ ಮಾಡಿದ ಡಾರ್ಲಿಂಗ್ ಕೃಷ್ಣ!

ನಟನಾಗಿ ಹೆಸರಾಗಿದ್ದ ಡಾರ್ಲಿಂಗ್ ಕೃಷ್ಣ ಲವ್ ಮಾಕ್ಟೇಲ್ ಎಂಬ ಸಿನಿಮಾ ನಿರ್ದೇಶನ ಮಾಡುವ ಮೂಲಕ ಮೊದಲ ಹೆಜ್ಜೆಯಲ್ಲಿಯೇ ಗೆಲುವು ಕಂಡಿದ್ದರು. ಅದಾದ ನಂತರ ಬಂದಿದ್ದ ಎರಡನೇ ಆವೃತ್ತಿಯೂ ಗೆದ್ದಿತ್ತು. ಆ ಗೆಲುವಿನ ಪ್ರಭೆಯಲ್ಲಿ ಲವ್ ಮಾಕ್ಟೇಲ್ 3 ಚಿತ್ರಕ್ಕೆ ಚಾಲನೆ ನೀಡಿದ್ದ ಡಾರ್ಲಿಂಗ್ ಕೃಷ್ಣ, ಇತ್ತೀಚೆಗಷ್ಟೇ ಮೋಷನ್ ಪೋಸ್ಟರ್ ಲಾಂಚ್ ಮಾಡಿದ್ದರು. ಈ ಮೂಲಕ ಮೂರನೇ ಆವೃತ್ತಿ ನವಿರಾದ ಕುತೂಹಲವೊಂದಕ್ಕೆ ಚಾಲನೆ ನೀಡಿತ್ತು. ಇದೀಗ ಹೊಸ ವರ್ಷದ ಉಡುಗೊರೆ ಎಂಬಂತೆ ಈ ಚಿತ್ರದ ಬಿಡುಗಡೆ ದಿನಾಂಕವನ್ನು ಡಾಲಿಂಗ್ ಕೃಷ್ಣ ಘೋಶಿಸಿದ್ದಾರೆ.

ಇದರೊಂದಿಗೆ ಲವ್ ಮಾಕ್ಟೇಲ್ 3 ಪ್ರೇಕ್ಷಕರ ಮುಂದೆ ಬರಲು ಇದೇ ಏಪ್ರಿಲ್ 10ರಂದು ಮುಹೂರ್ತ ನಿಗಧಿಯಾದಂತಾಗಿದೆ.

2020ರಲ್ಲಿ ಡಾರ್ಲಿಂಗ್ ಕೃಷ್ಣ ನಟಿಸಿ, ನಿರ್ದೇಶನ ಮಾಡಿದ್ದ ಲವ್ ಮಾಕ್ಟೇಲ್ ಚಿತ್ರ ತೆರೆಗಂಡಿತ್ತು. ನವಿರು ಪ್ರೇಮದೊಂದಿಗೆ ಹೊಸೆದುಕೊಂಡಿದ್ದ ಸೂಕ್ಷ್ಮ ಕಥನದ ಮೂಲಕ ಗೆದ್ದ ನಂತರ, ಲವ್ ಮಾಕ್ಟೇಲ್2 ಚಿತ್ರವನ್ನು ಕೃಷ್ಣ ರೂಪಿಸಿದ್ದರು. ಇದೀಗ ತೆರೆಗಾಣಲು ಸಜ್ಜಾಗಿರುವ ಲವ್ ಮಾಕ್ಟೇಲ್3 ಈ ಹಿಂದಿನ ಎರಡು ಆವೃತ್ತಿಗಳಿಗಿಂತಲೂ ಭಿನ್ನವಾಗಿರಲಿದೆ ಎಂಬ ವಿಚಾರವನ್ನಷ್ಟೇ ಕೃಷ್ಣ ಹಂಚಿಕೊಂಡಿದ್ದಾರೆ.

ಕಥೆ, ನಿರೂಪಣೆ ಸೇರಿದಂತೆ ಎಲ್ಲದರಲ್ಲಿಯೂ ಲವ್ ಮಾಕ್ಟೇಲ್ 3 ಹೊಸ ಅನುಭೂತಿ ಕೊಡಲಿದೆ ಎಂಬ ಭರವಸೆ ಕೃಷ್ಣ ಅವರದ್ದು. ಅಂದಹಾಗೆ, ಈ ಚಿತ್ರವನ್ನು ಡಾರ್ಲಿಂಗ್ ಕೃಷ್ಣ ಮತ್ತು ಮಿಲನಾ ನಾಗರಾಜ್ ಕ್ರಿಸ್‌ಮಿ ಬ್ಯಾನರಿನಡಿಯಲ್ಲಿ ನಿರ್ಮಾಣ ಮಾಡಿದ್ದಾರೆ. ನಕುಲ್ ಅಭಯಂಕರ್ ಸಂಗೀತ ನಿರ್ದೇಶನ, ಶ್ರೀ ಕ್ರೇಜಿ ಮೈಂಡ್ಸ್ ಛಾಯಾಗ್ರಹಣ ಮತ್ತು ಸಂಕಲ ಈ ಚಿತ್ರಕ್ಕಿದೆ. ಡಾರ್ಲಿಂಗ್ ಕೃಷ್ಣ, ಮಿಲನಾ ನಾಗರಾಜ್, ಸಂವೃತ, ಅಮೃತಾ ಅಯ್ಯಂಗಾರ್, ರಚೆಲ್ ಡೇವಿಡ್, ಅಭಿಲಾಶ್ ದಳಪತಿ, ಮುಂತಾದವರ ತಾರಾಗಣವಿದೆ. ಇದೀಗ ಎಲ್ಲ ಕೆಲಸ ಕಾರ್ಯಗಳನ್ನೂ ಮುಗಿಸಿಕೊಂಡಿರುವ ಚಿತ್ರತಂಡ, ಬೇಸಿಗೆ ರಜೆಯನ್ನು ಗಮನದಲ್ಲಿಟ್ಟುಕೊಂಡು ಏಪ್ರಿಲ್ 10ರಂದು ಪ್ರೇಕ್ಷಕರ ಮುಂದೆ ಬರಲು ತೀರ್ಮಾನಿಸಿದೆ.

## ಹಾರರ್ ಕಾಮಿಡಿ ಸಸ್ಪೆನ್ಸ್ ಸೀಟ್ ಎಡ್ಜ್ ಸಿನಿಮಾ ಬಿಡುಗಡೆಗೆ ಸಜ್ಜು

ಸಿದ್ದು ಮೂಲಿಮನಿ ನಟನೆಯ ಸೀಟ್ ಎಡ್ಜ್ ಸಿನಿಮಾ ಕನ್ನಡ ಚಿತ್ರರಂಗದಲ್ಲಿ ಭರವಸೆ ಮೂಡಿಸಿದೆ. ಈಗಾಗಲೇ ಚಿತ್ರದ ಟೀಸರ್, ಸಾಂಗ್ಸ್ ರಿಲೀಸ್ ಆಗಿ ಸಖತ್ ಸದ್ದು ಮಾಡ್ತಿದೆ. ಚೇತನ್ ಶೆಟ್ಟಿ ನಿರ್ದೇಶನದ ಚಿತ್ರದಲ್ಲಿ ಘೋಸ್ಟ್ ಹಂಟಿಂಗ್ ಕಥೆಯಿದೆ. ವ್ಲಾಗರ್ ಒಬ್ಬನ ಜೀವನದ ಏಳುಬೀಳಿನ ಜರ್ನಿಯನ್ನು ಚಿತ್ರದಲ್ಲಿ ಕಟ್ಟಿಕೊಡಲಾಗಿದೆ.

ರವೀಕ್ಷಾ ಶೆಟ್ಟಿ ಚಿತ್ರದಲ್ಲಿ ನಾಯಕಿಯಾಗಿ ನಟಿಸಿದ್ದಾರೆ. ಇನ್ನುಳಿದಂತೆ ಗಿರೀಶ್ ಶಿವಣ್ಣ, ರಾಘು ರಾಮನಕೊಪ್ಪ, ಮಿಮಿಕ್ರಿ ಗೋಪಿ, ಲಕ್ಷ್ಮಿ ಸಿದ್ದಯ್ಯ, ಕಿರಣ್ ನಾಯಕ್, ಪುನೀತ್ ಬಾಬು, ತೇಜು ಪೊನ್ನಪ್ಪ ಚಿತ್ರದ ಮುಖ್ಯಭೂಮಿಕೆಯಲ್ಲಿ ನಟಿಸಿದ್ದಾರೆ. ಗಿರಿಧರ ಟಿ ವಸಂತಪುರ ಹಾಗೂ ಶ್ರೀಮತಿ ಸುಜಾತಾ ಗಿರಿಧರ ಸೇರಿ ಸೀಟ್ ಎಡ್ಜ್ ಸಿನಿಮಾ ನಿರ್ಮಾಣ ಮಾಡಿದ್ದಾರೆ.

ಬೆಂಗಳೂರು, ಶಿವಮೊಗ್ಗ, ಮೈಸೂರು ಹಾಗೂ ಕುದುರೆ ಮುಖ ಸುತ್ತಾಮುತ್ತಾ ಚಿತ್ರದ ಚಿತ್ರೀಕರಣ ನಡೆದಿದೆ. ದೀಪಕ್ ಕುಮಾರ್ ಛಾಯಾಗ್ರಹಣ, ಆಕಾಶ್ ಪರ್ವ ಸಂಗೀತ ಚಿತ್ರಕ್ಕಿದೆ. ರಘು ಆರ್‌ಜೆ ಚಿತ್ರದ ಹಾಡುಗಳಿಗೆ ಡ್ಯಾನ್ಸ್ ಕೊರಿಯೋಗ್ರಫಿ ಮಾಡಿದ್ದಾರೆ. ಜನವರಿ 30ರಂದು ಸೀಟ್ ಎಡ್ಜ್ ಸಿನಿಮಾ ತೆರೆಗೆ ಬರಲಿದೆ.

ಇತ್ತೀಚೆಗೆ ಹೊಸ ವರ್ಷದ ಸಂಭ್ರಮದಲ್ಲಿ ಚಿತ್ರದ ಹೊಸದೊಂದು ಹಾಡು ಬಿಡುಗಡೆ ಆಗಿತ್ತು. ಲೈಫು ಯಾಕೋ ಖಾಲಿ ಖಾಲಿ ಅಂತ ಶುರುವಾಗುವ ಹಾಡಿನಲ್ಲಿ ಸಿದ್ದು ಜೊತೆ ರಾಘು ರಾಮನಕೊಪ್ಪ ಹಾಡಿಗೆ ಹೆಜ್ಜೆ ಹಾಕಿದ್ದಾರೆ. ಸಿಕ್ಕಾಪಟ್ಟೆ ಕಲರ್‌ಫುಲ್ ಕಾಸ್ಟ್ಯೂಮ್‌ಗಳಲ್ಲಿ ಬಿಂದಾಸ್ ಆಗಿ ಕುಣಿದಿದ್ದಾರೆ. ನಾಗಾರ್ಜುನ ಶರ್ಮಾ ಸಾಹಿತ್ಯ ಬರೆದಿದ್ದು ಸಿದ್ದಾರ್ಥ್ ಬೆಳ್ಮಣ್ಣು ಹಾಡಿಗೆ ದನಿಯಾಗಿದ್ದಾರೆ.

ಇದಕ್ಕೂ ಮುನ್ನ ಹಂಗೋ ಹಿಂಗೋ ಹಾಗೂ ಸಾರಿ ಹೇಳುವೆ ಎಂಬ ಮತ್ತೆರಡು ಹಾಡುಗಳು ರಿಲೀಸ್ ಆಗಿ ಹಿಟ್ ಲಿಸ್ಟ್ ಸೇರಿತ್ತು. ಹಂಗೋ ಹಿಂಗೋ ಹಾಡಿನ ಹುಕ್ ಸ್ಟೆಪ್ಸ್ ಸೋಶಿಯಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟೆ ವೈರಲ್ ಆಗಿದೆ. ಚಿತ್ರದಲ್ಲಿ ಕೂಡ ಸಿದ್ದು ಎಂಬ ವ್ಲಾಗರ್ ಪಾತ್ರದಲ್ಲಿ ಮೂಲಿಮನಿ ನಟಿಸಿದ್ದಾರೆ. ಬಹಳ ಉತ್ಸಾಹಿ ಯುವಕ ವ್ಲಾಗರ್ ಆಗಿ ಏನಾದರೂ ಸಾಧನೆ ಮಾಡಬೇಕು ಎಂದು ಒಂದು ಸಾಹಸಕ್ಕೆ ಕೈ ಹಾಕುತ್ತಾನೆ. ಆ ಹಾದಿಯಲ್ಲಿ ಎದುರಾಗುವ ಅನಿರೀಕ್ಷಿತ ಘಟನೆಗಳೇ ಸಿನಿಮಾ ಕಥೆ. ಇತ್ತೀಚೆಗೆ ಸಿದ್ದು ನಟಿಸಿದ್ದ ಲವ್ ಯು ಮುದ್ದು ಸಿನಿಮಾ ತೆರೆಗೆ ಬಂದಿತ್ತು. ಇದೀಗ ಸೀಟ್ ಎಡ್ಜ್ ಕಥೆ ಹೇಳಲು ಬರ್ತಿದ್ದಾರೆ.




ಪ್ಯಾರಾನಾರ್ಮಲ್ ಇನ್ವೆಸ್ಟಿಗೇಟರ್, ಉತ್ತರ ಭಾರತದ ಘೋಸ್ಟ್ ಹಂಟರ್ ಖ್ಯಾತಿಯ ಗೌರವ್ ತಿವಾರಿ ಜೀವನದ ಕೆಲ ಘಟನೆಗಳೇ ಸೀಟ್ ಎಡ್ಜ್ ಚಿತ್ರಕ್ಕೆ ಸ್ಪೂರ್ತಿ ಎನ್ನಲಾಗ್ತಿದೆ. ಇದರ ನಡುವೆ ಕಾಮಿಡಿ, ನಾಯಕ ಸಿದ್ದು ಲವ್ ಟ್ರ್ಯಾಕ್ ಕೂಡ ಸಿನಿಮಾದಲ್ಲಿದೆ. ಹಾಗಾಗಿ ಈ ಸಿನಿಮಾ ಬಗ್ಗೆ ನಿರೀಕ್ಷೆ ಮೂಡಿದೆ. ವಿಜಯ್ ಸಿನಿಮಾಸ್ ಬ್ಯಾನರ್ ಮೂಲಕ ನಿರ್ಮಾಪಕರು ಚಿತ್ರವನ್ನು ವಿತರಣೆ ಮಾಡುತ್ತಿದ್ದಾರೆ.

ಇದು ಸೋಶಿಯಲ್ ಮೀಡಿಯಾ ಜಮಾನ. ಜನ ದಿನದ ಬಹುತೇಕ ಸಮಯವನ್ನು ಫೋನ್ ನೋಡುತ್ತಾ ಕಳೆಯುತ್ತಿದ್ದಾರೆ. ಯುವಕರಿಗೆ ಸೋಶಿಯಲ್ ಮೀಡಿಯಾ ಸಾಕಷ್ಟು ಅವಕಾಶಗಳನ್ನು ತಂದೊಡ್ಡಿದೆ. ಅದರಲ್ಲಿ ಯೂಟ್ಯೂಬ್ ವಿಡಿಯೋ, ರೀಲ್ಸ್ ಅಂತೆಲ್ಲಾ ಸಿಕ್ಕಾಪಟ್ಟೆ ಆಕ್ಟೀವ್ ಆಗಿದ್ದಾರೆ. ಇನ್ನು ಕೆಲವರು ಲೈಕ್ಸ್, ವೀವ್ಸ್ ಹಾಗೂ ಜನಪ್ರಿಯತೆಗಾಗಿ ಸಾಹಸ ಮಾಡಲು ಮುಂದಾಗುತ್ತಾರೆ. ಆ ಹಾದಿ ಅಷ್ಟು ಸುಲಭವಾಗಿರುವುದಿಲ್ಲ. ಅದೇ ರೀತಿ ಘೋಸ್ಟ್ ಹಂಟಿಂಗ್ ಬಗ್ಗೆ ಸಾಕಷ್ಟು ಜನರಿಗೆ ಆಸಕ್ತಿ, ಕುತೂಹಲ ಸಹ ಇರುತ್ತದೆ. ಅಂತಹ ವಿಚಾರಗಳ ಸುತ್ತಾ ಸೀಟ್ ಎಡ್ಜ್ ಸಿನಿಮಾ ನಿರ್ಮಾಣವಾಗಿದೆ.

# ರೈತರು ಸ್ವಾವಲಂಬಿಗಳಾಗಲು ಹೈನುಗಾರಿಕೆ ಪಾತ್ರ ಪ್ರಮುಖ

## ಹಡೇನಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನಿರ್ದೇಶಕರಿಗೆ ಶಾಸಕ ಬಾಲಕೃಷ್ಣ ಅಭಿನಂದನೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ರೈತರು ಸ್ವಾವಲಂಬಿಗಳಾಗಲು ಹೈನುಗಾರಿಕೆ ಅಭಿವೃದ್ಧಿ ಬಹುಮುಖ್ಯ ಪಾತ್ರ ವಹಿಸಿದ್ದು, ಈ ಕ್ಷೇತ್ರಕ್ಕೆ ಆದ್ಯತೆ ನೀಡುವುದು ನಮ್ಮ ಕರ್ತವ್ಯ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ಹೇಳಿದರು.

ತಾಲ್ಲೂಕಿನ ಹಡೇನಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನೂತನ ನಿರ್ದೇಶಕರ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾವು ಹಾಸನ ಹಾಲು ಒಕ್ಕೂಟದ ನಿರ್ದೇಶಕರಾಗುವ ಮೊದಲು ತಾಲೂಕಿನಲ್ಲಿ ಕೇವಲ 35 ಸಂಘಗಳಿದ್ದವು. ಇಂದು 342 ಸಂಘಗಳು ಸ್ಥಾಪನೆಯಾಗಿವೆ. 307 ಹೊಸ ಡೇರಿಗಳನ್ನು ನಿರ್ಮಾಣ ಮಾಡಲಾಗಿದೆ. ಈ ಹೈನುಗಾರಿಕೆಯ ಉತ್ತೇಜನದಿಂದ ರೈತರ ಆರ್ಥಿಕ ಬದುಕು ಸುಧಾರಿಸಿದ್ದು, ಗ್ರಾಮೀಣ ಭಾಗದಲ್ಲಿ ಮಹಿಳೆಯರು ಮನೆಗಳಲ್ಲಿ ಹಸುಗಳನ್ನು ಸಾಕಿ ಸ್ವಯಂ ಉದ್ಯೋಗದಿಂದ ಸ್ವಾವಲಂಬಿಗಳಾಗಿ ಬದುಕು ಸಾಗಿಸಲು ಸಹಕಾರಿಯಾಗಿದೆ ಎಂದರು.

ನಾನು ತಾಲ್ಲೂಕು ಪಂಚಾಯಿತಿ ಅಧ್ಯಕ್ಷನಾಗಿದ್ದ ಅವಧಿಯಿಂದಲೂ ಶಿಕ್ಷಣ, ಆರೋಗ್ಯ, ಕೃಷಿ, ಹೈನುಗಾರಿಕೆ, ಸಹಕಾರಿ ಕ್ಷೇತ್ರ, ಕ್ರೀಡೆ ಹಾಗೂ ಸಾಹಿತ್ಯ ಕ್ಷೇತ್ರ ಸೇರಿದಂತೆ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಶ್ರಮ ವಹಿಸಿದ್ದೇವೆ. ಆಯಾ ಕಾಲಘಟ್ಟದಲ್ಲಿ ಯಾವುದೇ ಸರ್ಕಾರಗಳು ಇದ್ದರೂ ಸಹ ಶಾಸನಬದ್ಧವಾಗಿ ಕೊಟ್ಟ ಅಧಿಕಾರವನ್ನು ಸದ್ಬಳಕೆ ಮಾಡಿಕೊಂಡು ಕ್ಷೇತ್ರದ ಜನತೆಯ ಪರವಾಗಿ ಸೇವೆ ಸಲ್ಲಿಸುತ್ತಿದ್ದೇನೆ. ಡೇರಿ ಕಟ್ಟಡ ನಿರ್ಮಾಣಕ್ಕೆ ಸಹಾಯಧನ, ಮಹಾತ್ಮ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಗ್ರಾಮಗಳ ಅಭಿವೃದ್ಧಿಗೆ ಸಹಕಾರ ನೀಡಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಡೇರಿ ವ್ಯವಸ್ಥೆ ಅತ್ಯು



ತ್ತಮವಾಗಿ ಅಭಿವೃದ್ಧಿ ಹೊಂದಲು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರವರು, ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಹಾಗೂ ಮಾಜಿ ಸಚಿವ ರೇವಣ್ಣನವರ ಶ್ರಮವಿದೆ. ಕೊಳವೆ ಬಾವಿಗಳು ನೀರಿಲ್ಲದೆ ಒಣಗಿದ ಸಂದರ್ಭದಲ್ಲಿ ರೈತ ಮಹಿಳೆಯರ ಮಾಂಗಲ್ಯ ಸರವನ್ನು ಮಾರಾಟ ಮಾಡಿ ಕೊಳವೆ ಬಾವಿ ಕೊರೆಸುವ ಪರಿಸ್ಥಿತಿ ಇತ್ತು. ಈ ಭಾಗದಲ್ಲಿ ಹೇಮಾವತಿ ನಾಲೆಯಿಂದ ಏತ ನೀರಾವರಿ ಮೂಲಕ ಕೆರೆಗಳನ್ನು ತುಂಬಿಸಿದ ಪರಿಣಾಮವಾಗಿ ಕೊಳವೆ ಬಾವಿಗಳು ಪುನಶ್ಚೇತನಗೊಂಡಿದ್ದು, ಶೇ.95 ರಷ್ಟು ನೀರಾವರಿ ಆಗಿದೆ. ಸ್ಪೇಸ್ ವರದಿಯ ಪ್ರಕಾರ ನಮ್ಮ ತಾಲ್ಲೂಕು ಬ್ಲಾಕ್ ಏರಿಯಾದಿಂದ ಹೊರತೆಗೆಯಲು ಶ್ರಮ ವಹಿಸಿದ್ದೇವೆ ಎಂದು ತಿಳಿಸಿದರು.

ಇದರಿಂದ ತೆಂಗಿನ ಪಸಲು ಉತ್ತಮ ಇಳುವರಿಯಾಗಿದ್ದು, ರೈತರು ಮೆಕ್ಕೆಜೋಳ ಬೆಳೆಯುತ್ತಿರುವುದರಿಂದ ಎಕರೆಗೆ 50 ರಿಂದ 60 ಸಾವಿರ ರೂ. ಆದಾಯವನ್ನು ಪಡೆಯುವಂತಾಗಿದೆ. ಅಲ್ಲದೆ, ಹೈನುಗಾರಿಕೆಗೆ ಉತ್ತೇಜನವಾಗಿದೆ. 2,76,000 ಲೀಟರ್ ಹಾಲಿನ ಉತ್ಪಾದನೆಯಾಗುತ್ತಿದ್ದು, 400 ಕೋಟಿ ರೂ. ವಹಿವಾಟು ಆಗುತ್ತಿದೆ. ಹಾಲಿನ ಉತ್ಪಾದನೆಯಲ್ಲಿ ನಮ್ಮ ತಾಲ್ಲೂಕು ರಾಜ್ಯದಲ್ಲಿ ನಾಲ್ಕನೇ ಸ್ಥಾನದಲ್ಲಿದ್ದು, ರೈತರ ಆರ್ಥಿಕ ಸ್ಥಿತಿ ದ್ವಿಗುಣವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಮಾಜಿ ಅಧ್ಯಕ್ಷ ರಮೇಶ್ ಕುಂಬಾರಳ್ಳಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಪಿಎಂಸಿ ಅಧ್ಯಕ್ಷ ವೆಂಕಟೇಶ್, ವಳಗೆರಳ್ಳಿ ಮಂಜಣ್ಣ, ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷ ಲತಾ ತಮ್ಮಯ್ಯ, ಜಯರಾಮ್, ಮುಖಂಡ ರಾದ ಪ್ರವೀಣ್ ಚಿಕ್ಕಬಿಳ್ಳಿ, ಸಿಂಹಾದ್ರಿ, ಮಂಜಣ್ಣ, ಗೇಣಿದಾರ್, ಕಾಳೇಗೌಡ, ರವಿ, ದೊರೆಸ್ವಾಮಿ, ಎಚ್.ಎನ್.ಮಂಜೇಗೌಡ, ಗೋವಿಂದೇಗೌಡ ಇನ್ನಿತರರು ಉಪಸ್ಥಿತರಿದ್ದರು.

# ಯುವಕರು ದುಶ್ಚಟಗಳಿಂದ ದೂರವಿರಿ

• ಪ್ರಜೋದಯ ವರದಿ

**ಸಕಲೇಶಪುರ:** ಯುವಕರು ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ಉತ್ತಮ ಆರೋಗ್ಯಕ್ಕಾಗಿ ಕ್ರೀಡೆ, ವ್ಯಾಯಾಮ, ಪ್ರಾಣಾಯಾಮ ಹಾಗೂ ದೈಹಿಕ ಕಸರತ್ತುಗಳನ್ನು ದಿನನಿತ್ಯದ ಜೀವನದ ಭಾಗವಾಗಿಸಿಕೊಳ್ಳಬೇಕೆಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಕುನಿಗನಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಮೋದಿ ಕ್ರಿಕೆಟ್ ಕಪ್ ಕ್ರಿಕೆಟ್ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಪರಿಸ್ಥಿತಿಯಲ್ಲಿ ಕೆಲ ಯುವಕರು ಮಾದಕ ವಸ್ತುಗಳು, ಮದ್ಯಪಾನ ಹಾಗೂ ಧೂಮಪಾನದಂತಹ ದುಶ್ಚಟಗಳಿಗೆ ಬಲಿಯಾಗುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಪೋಷಕರು ತಮ್ಮ ಮಕ್ಕಳ ಮೇಲೆ ಅನೇಕ ಕನಸುಗಳನ್ನು ಕಟ್ಟಿಕೊಂಡಿರುತ್ತಾರೆ. ಆ ಕನಸುಗಳಿಗೆ ಧಕ್ಕೆಯಾಗದಂತೆ ಯುವಕರು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.



ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಪ್ರಾಮಾಣಿಕತೆ, ಕಾರ್ಯಕ್ಷಮತೆ ಹಾಗೂ ಬದ್ಧತೆಯ ಆಡಳಿತದ ಮೂಲಕ ಭಾರತವನ್ನು ಜಗತ್ತಿನ ಪ್ರಮುಖ ಆರ್ಥಿಕ ಶಕ್ತಿಯಾಗಿ ರೂಪಿಸುತ್ತಿದೆ. ಪಾಶ್ಚಾತ್ಯ ದೇಶಗಳೇ ಭಾರತದ ಆರ್ಥಿಕ ಬೆಳವಣಿಗೆಯನ್ನು ಪ್ರಶಂಸಿಸುತ್ತಿರುವುದು ದೇಶದ ಸಾಧನೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ವಿಕಸಿತ ಭಾರತ ಪರಿಕಲ್ಪನೆಯೊಂದಿಗೆ 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಗುರಿಯನ್ನು ಸರ್ಕಾರ ಹೊಂದಿದೆ. ಬಡವರು, ಮಹಿಳೆಯರು, ಯುವಕರು ಹಾಗೂ ರೈತರು ಹಿಂದುಳಿಯದಂತೆ ನೋಡಿಕೊಳ್ಳುವ ಪ್ರಧಾನಿಯ ದೃಷ್ಟಿಕೋನದಿಂದ ವಿಶ್ವಗುರು ಭಾರತದ ಕನಸು ನನಸಾಗಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನೇತ್ರಾವತಿ ಮಂಜುನಾಥ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ಗ್ರಾಮ ಪಂಚಾಯಿತಿ ಸದಸ್ಯ ಪ್ರಕಾಶ್, ಮುಖಂಡರಾದ ಪ್ರದೀಪ್ ನಿಡನೂರು, ಪ್ರಭು, ಪೂವಯ್ಯ, ಅಕ್ಷತಾ ಕೋಡಗಲವಾಡಿ, ಉಮಾನಾಥ್ ಸುವರ್ಣ, ರೇಣು ಇತರರು ಉಪಸ್ಥಿತರಿದ್ದರು.

# ಬದುಕು ವಿಕಸನಗೊಳ್ಳಲು ಪ್ರವಾಸ ಸಹಕಾರಿ

• ಪ್ರಜೋದಯ ವರದಿ

**ಅರಸೀಕೆರೆ:** ದೇಶ ಸುತ್ತು ಕೋಶ ಓದು ಎಂಬ ಹಿರಿಯರ ಮಾತು ಸರ್ವ ಕಾಲಕ್ಕೂ ಸತ್ಯ ಎಂದು ಶಿಕ್ಷಣ ಸುಧಾರಣಾ ಸಮಿತಿಯ ಸದಸ್ಯ ವೈ.ಕೆ. ದೇವರಾಜ್ ಕಿವಿಮಾತು ಹೇಳಿದರು.

ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಉತ್ತರ ಕರ್ನಾಟಕದ ಐತಿಹಾಸಿಕ ಸ್ಥಳಗಳು ಮತ್ತು ಪ್ರವಾಸಿ ತಾಣಗಳ ವೀಕ್ಷಣೆಗೆ ತೆರಳಿದ ಶಾಲಾ ಮಕ್ಕಳಿಗೆ ಶುಭ ಕೋರಿ ಮಾತನಾಡಿದ ಅವರು, ಪಠ್ಯ ಪುಸ್ತಕದ ಶಿಕ್ಷಣ ನಮ್ಮ ಜ್ಞಾನಾರ್ಜನೆಯನ್ನು ಹೆಚ್ಚಿಸಿದರೆ ಪಠ್ಯೇತರ ವಿಷಯಗಳ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳುವುದು ಮತ್ತು ಖುದ್ದು ವೀಕ್ಷಿಸಿ ವಾಸ್ತವಂಶ ತಿಳಿದುಕೊಳ್ಳುವುದರಿಂದ ಭವಿಷ್ಯದಲ್ಲಿ ನಮ್ಮ ಬದುಕು ವಿಕಸನಗೊಳಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.



ಶಿಕ್ಷಣ ಸಂಯೋಜಕ ವೈ.ಸಿ. ಮಲ್ಲೇಶ್ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕರ್ನಾಟಕ ದರ್ಶನ ಯೋಜನೆ ಅಡಿ ನಾಲ್ಕು ದಿನಗಳ ಪ್ರವಾಸಕ್ಕೆ ಸರ್ಕಾರ ಅನುವು ಮಾಡಿಕೊಟ್ಟಿದ್ದು ಪ್ರವಾಸದ ವೇಳೆಯಲ್ಲಿ ಊಟ ಉಪಹಾರ ಮತ್ತು ವಸತಿ ವ್ಯವಸ್ಥೆಯನ್ನು ಸಹ ಸರ್ಕಾರ ಪೂರೈಸುತ್ತಿದ್ದು ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವ ಮೂಲಕ ಪ್ರವಾಸಿ ತಾಣಗಳ ವೀಕ್ಷಣೆ ಮಾಡುವ ಜೊತೆಗೆ ಪ್ರವಾಸಿ ತಾಣಗಳು ಐತಿಹಾಸಿಕ ಸ್ಮಾರಕಗಳ ಬಗ್ಗೆ ಮಾಹಿತಿ ತಿಳಿದುಕೊಂಡಿದ್ದೆ ಆದರೆ ಭವಿಷ್ಯದಲ್ಲಿ ನಿಮ್ಮ ಈ ಪ್ರವಾಸ ಉಪಯುಕ್ತ ಎನಿಸುತ್ತದೆ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಬಿಆರ್‌ಸಿ ಶಂಕರ್, ಶಿಕ್ಷಣ ಸಂಯೋಜಕ ಹರೀಶ್‌ಕುಮಾರ್, ಸತೀಶ್, ಗ್ರಾಮ ಪಂಚಾಯಿತಿ ಸದಸ್ಯ ಈಶ್ವರ್, ಶಿಕ್ಷಕರು ಮತ್ತು ಮಕ್ಕಳ ಪೋಷಕರು ಉಪಸ್ಥಿತರಿದ್ದರು.

# ಕಾಯ್ದೆಗಳ ನಿಯಮಗಳನ್ನು ತಿಳಿದು ಕೆಲಸ ಮಾಡಬೇಕು

• ಪ್ರಜೋದಯ ವರದಿ

**ಹಾಸನ:** ಕಂದಾಯ ಇಲಾಖೆ ಜನಸಾಮಾನ್ಯರಿಗೆ ಹತ್ತಿರದ ಇಲಾಖೆಯಾಗಿದ್ದು, ಬದಲಾದ ನಿಯಮಗಳನ್ನು ತಿಳಿದುಕೊಂಡು ಸಾರ್ವಜನಿಕರಿಗೆ ಸೇವೆ ಒದಗಿಸುವುದು ಈ ಇಲಾಖೆಯ ಜವಾಬ್ದಾರಿ ಎಂದು ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ ತಿಳಿಸಿದರು.

ಹಾಸನಾಂಬ ಕಲಾಕ್ಷೇತ್ರದಲ್ಲಿ ನಡೆದ ಕರ್ನಾಟಕ ಭೂ ಕಂದಾಯ ನಿಯಮ 1966ರ ತಿದ್ದುಪಡಿಗಳ ಕುರಿತು ಜಿಲ್ಲೆಯ ಎಲ್ಲಾ ಕಂದಾಯ ಅಧಿಕಾರಿ ಮತ್ತು ಸಿಬ್ಬಂದಿಗೆ ಏರ್ಪಡಿಸಲಾಗಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ



ಮಾತನಾಡಿ, ಪ್ರಸ್ತುತ ಕಾಲಘಟ್ಟದಲ್ಲಿ ದಿನ ಕಳೆದಂತೆ ಕಂದಾಯ ಇಲಾಖೆಗೆ ಸಂಬಂಧಿಸಿದ ನಿಯಮಗಳು ಬದಲಾವಣೆಯಾಗುತ್ತಿರುತ್ತವೆ. ಇಂತಹ ಕಾರ್ಯಾಗಾರದ ಮೂಲಕ ಮಾಹಿತಿ ಪಡೆದು ಹೊಸ ನಿಯಮಾವಳಿಗಳನ್ನು ಅರ್ಥೈಸಿಕೊಂಡು ಉತ್ತಮ ಸೇವೆ ಒದಗಿಸಬೇಕು ಎಂದರು.

ಕಾಯಿದೆಗಳು ಆಗಾಗ್ಗೆ ಬದಲಾಗುತ್ತಿರುತ್ತವೆ, ಕಾಯ್ದೆಗಳ ನಿಯಮಗಳನ್ನು ತಿಳಿದು ಕೆಲಸವನ್ನು ಮಾಡಬೇಕು, ಇಲ್ಲವಾದರೆ ತಪ್ಪುಗಳಾಗುವ ಸಂಭವವಿರುತ್ತದೆ. ಕಂದಾಯ ಇಲಾಖೆಯ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗುತ್ತಿದ್ದು ತಪ್ಪುಗಳಾಗದಂತೆ ಎಚ್ಚರ ವಹಿಸಬೇಕು. ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳು ನೀಡುವ ಮಾಹಿತಿ ಪಡೆದುಕೊಂಡು, ಗೊಂದಲವಿದ್ದರೆ ಕೂಡಲೇ ಕೇಳಿ ಬಗೆಹರಿಸಿಕೊಳ್ಳಬೇಕು. ಕಂದಾಯ ಇಲಾಖೆಯನ್ನು ಮಾತ್ರ ಇಲಾಖೆ ಎಂದು ಕರೆಯಲಾಗುತ್ತದೆ ಹಾಗೂ ಸರ್ಕಾರದಲ್ಲಿ ಕಂದಾಯ ಇಲಾಖೆ ಭೂಮಿಯ ಮಾಲೀಕನಾಗಿ ಕಾರ್ಯ ನಿರ್ವಹಿಸುತ್ತದೆ. ಸರ್ಕಾರಕ್ಕೆ ಆದಾಯದ ವಿಚಾರ ಬಂದಾಗ, ಭೂ ಕಂದಾಯ ಮಾತ್ರ ಮುಖ್ಯವಲ್ಲ, ಜಿ.ಎಸ್.ಟಿ., ಸಾರಿಗೆ ಮತ್ತು ಇನ್ನಿತರ ಇಲಾಖೆಗಳಿಂದ ಬರುವ ಆದಾಯ ಸಹ ಸರ್ಕಾರಕ್ಕೆ ಮುಖ್ಯವೇ ಆಗಿದೆ ಎಂದರು.

ಯಾವುದೇ ಒಂದು ಇಲಾಖೆಯ ಅಭಿವೃದ್ಧಿ ಕಾರ್ಯಗಳಿಗೆ ಭೂಮಿಯ ಅವಶ್ಯಕತೆ ಇದ್ದಾಗ ಭೂ ಸ್ವಾಧೀನ ಪಡಿಸಿಕೊಳ್ಳುವ ವೇಳೆಯಲ್ಲಿ ಕಂದಾಯ ಇಲಾಖೆಯ ಅಗತ್ಯತೆ ಹೆಚ್ಚಿರುತ್ತದೆ. ಸ್ವಾಧೀನದ ನಿಯಮಗಳು ಈ ಸಂದರ್ಭದಲ್ಲಿ ಉಪಯೋಗವಾಗುತ್ತವೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಮಾತನಾಡಿ, ಭೂ ಕಂದಾಯ ನಿಯಮಗಳಿಗೆ ಈಗಾಗಲೇ ಹಲವಾರು ತಿದ್ದುಪಡಿಗಳನ್ನು ತರಲಾಗಿದೆ. ಜಿಲ್ಲೆಯ ಎಲ್ಲಾ ಕಂದಾಯ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಗಳು ತಮ್ಮ ಕರ್ತವ್ಯದಲ್ಲಿ ಬದಲಾವಣೆ ಮಾಡಿಕೊಳ್ಳಲು ತಯಾರಾಗಬೇಕು. ತಿದ್ದುಪಡಿ ವಿಧೇಯಕಗಳನ್ನು ಅರ್ಥ ಮಾಡಿಕೊಂಡು ಕೆಲಸ ಮಾಡಬೇಕು ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ವಿಶೇಷ ಭೂಸ್ವಾಧೀನಾಧಿಕಾರಿ ಮಂಜುನಾಥ್ ಹಾಗೂ ಇನ್ನಿತರರು ಹಾಜರಿದ್ದರು.

# ತಟ್ಟೆಕೆರೆ: ಪೋಷಕರ ಸಭೆಯಲ್ಲಿ ಬಗೆಹರಿಯದ ವಿವಾದ

• ಪ್ರಜೋದಯ ವರದಿ

**ಹೊಳೆನರಸೀಪುರ:** ತಾಲ್ಲೂಕಿನ ತಟ್ಟೆಕೆರೆ ಗ್ರಾಮ ಸಮೀಪದ ಸರ್ಕಾರಿ ಆದರ್ಶ ಶಾಲೆ ಉತ್ತಮ ಫಲಿತಾಂಶ, ಗುಣಮಟ್ಟದ ಶಿಕ್ಷಣಕ್ಕೆ ಹೆಸರಾಗಿದ್ದು, ಎಸ್‌ಡಿಎಂಸಿ ಅಧ್ಯಕ್ಷ ಮತ್ತು ಡಿ ದರ್ಜೆ ನೌಕರನೊಬ್ಬನ ಪ್ರತಿಷ್ಠೆಯಿಂದಾಗಿ ಈ ಶಾಲೆ ಇದೀಗ ವಿವಾದದ ಕೇಂದ್ರ ಬಿಂದುವಾಗಿ ಮಾರ್ಪಟ್ಟಿದೆ.

ಎಸ್‌ಡಿಎಂಸಿ ಅಧ್ಯಕ್ಷ ಮತ್ತು ಡಿದರ್ಜೆ ನೌಕರನ ನಡುವಿನ ಶೀತಲ ಸಮರದಿಂದ ಶಿಕ್ಷಕರಿಗೆ ಆಗುತ್ತಿರುವ ತೊಂದರೆ, ಮಕ್ಕಳ ಓದಿಗೆ ಆಗುತ್ತಿರುವ ಅಡಚಣೆ ಇಂತಹ ಮುಸುಕಿನ ಗುದ್ದಾಟ ಕುರಿತು ಸಮಸ್ಯೆಗಳನ್ನು ಅನಾವರಣಗೊಳಿಸಲು ಪೋಷಕರು ಜಮಾಯಿಸಿದ್ದರು. ಪೋಷಕರ ಒತ್ತಾಯದ ಮೇರೆಗೆ ಶಾಲೆಯಲ್ಲಿ ಬಿಇಒ ಸೋಮಲಿಂಗೇಗೌಡ ಮತ್ತು



ಮುಖ್ಯಶಿಕ್ಷಕರ ಸಮ್ಮುಖದಲ್ಲಿ ಪೋಷಕರ ಸಭೆ ನಡೆಸಲಾಯಿತು. ಶಾಲಾ ಆಡಳಿತ ಮತ್ತು ಸ್ವಚ್ಛತಾ ಕಾರ್ಯದಲ್ಲಿ ಅಸಮಾಧಾನಗೊಂಡಿದ್ದ ಪೋಷಕರು ತಮ್ಮ ಸಮಸ್ಯೆ ತೋಡಿಕೊಂಡರು.

ಅಭಿವೃದ್ಧಿ ಸಮಿತಿ ಅಧ್ಯಕ್ಷ ಗಿರೀಶ್ ಹಾಗೂ ಡಿದರ್ಜೆ ನೌಕರ ದರ್ಶನ್ ವಿರುದ್ಧ ಪೋಷಕರಲ್ಲೇ ಎರಡು ಬಗೆಯ ಪರಸ್ಪರ ವಾಗ್ವಾದ ನಡೆದವು. ಇಬ್ಬರೂ ವಿವಾದಿತರ ಪರ, ವಿರುದ್ಧವಾಗಿ ಕೆಲವು ಪೋಷಕರು ವಕಾಲತ್ತು ವಹಿಸಿದ್ದರು. ಇದರಿಂದ ಬಗೆಹರಿಯುವ ಲಕ್ಷಣ ಕಾಣದೆ ಅವರವರ ಇತಿಮಿತಿಗಳನ್ನು ಮತ್ತು ಸೀಮಿತ ಕರ್ತವ್ಯ ಕುರಿತು ಬಿಇಒ ತಿಳಿಸಿಕೊಟ್ಟರು. ಕಡೆಗೂ ಸೂಕ್ತ ಪರಿಹಾರ ಕಾಣದೇ ಸಭೆ ಅಂತ್ಯಗೊಂಡಿತು. ಇತ್ತೀಚೆಗಷ್ಟೆ ಆದರ್ಶ ಶಾಲೆಗೆ ತೆರಳುವ ಚನ್ನರಾಯಪಟ್ಟಣದ ರಸ್ತೆ ಹದಗೆಟ್ಟ ಸ್ಥಿತಿ ಕುರಿತು ಪೋಷಕರ ಕೋರಿದ್ದರ ಮೇರೆಗೆ ಪತ್ರಿಕೆಗಳು ಗಮನ ಸೆಳೆದು ಸುದ್ದಿ ಬಿತ್ತರಿಸಿತ್ತು. ಗುಂಡಿ ಬಿದ್ದ ರಸ್ತೆ ಸರಿಪಡಿಸಲಾಗುತ್ತಿದೆ. ಆದರೆ ಇದೀಗ ಅದೇ ಪೋಷಕರು ಶಾಲೆಯ ವಿವಾದದ ಬಗ್ಗೆಯೂ ಗಮನ ಸೆಳೆದಿದ್ದಾರೆ.

> ಸಭೆಯಲ್ಲಿ ನಾವು ನಿಯಮ ಹೇಳುವ ಅವಕಾಶಕ್ಕೂ ಎಡೆಮಾಡಿಕೊಡಲಿಲ್ಲ. ಎರಡೂ ಬಣಗಳಾಗಿ ಪರಸ್ಪರ ವಾಗ್ವಾದಕ್ಕಿಳಿದರು. ಇದರಿಂದ ಸಭೆ ಮೊಟಕುಗೊಳಿಸಬೇಕಾಯಿತು. ಕಾರಣ ಶಾಲಾ ವ್ಯಾಪ್ತಿಯಾದ್ದರಿಂದ ಮಕ್ಕಳ ಮೇಲೆ ಪ್ರಭಾವ ಬೀರುತ್ತದೆ. ನೋಟಿಸ್ ನೀಡಿದ್ದೇನೆ. ಉತ್ತರಿಸಿದ ನಂತರ ಕ್ರಮ ಅನುಸರಿಸಲಾಗುವುದು.
>
> **– ಸೋಮಲಿಂಗೇಗೌಡ, ಕ್ಷೇತ್ರ ಶಿಕ್ಷಣಾಧಿಕಾರಿ, ಹೊಳೆನರಸೀಪುರ.**

# ಬೀದಿ ನಾಯಿಗಳ ಸಂತಾನ ಶಕ್ತಿಹರಣ ಕೇಂದ್ರಕ್ಕೆ ವಿರೋಧ

• ಪ್ರಜೋದಯ ವರದಿ

**ಆಲೂರು:** ತಾಲ್ಲೂಕಿನ ಸೊಪ್ಪಿನಹಳ್ಳಿ ಗ್ರಾಮದ ಸರ್ವೆ ನಂ. 44 ರಲ್ಲಿ ಬೀದಿ ನಾಯಿಗಳ ಸಂತಾನ ಶಕ್ತಿಹರಣ ಶಸ್ತ್ರಚಿಕಿತ್ಸಾ ಕೇಂದ್ರ ಸ್ಥಾಪಿಸಲು ಉದ್ದೇಶಿಸಿರುವುದನ್ನು ಕೈ ಬಿಡಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಗ್ರಾಮಸ್ಥ ನವೀನ್ ಮಾತನಾಡಿ, ಆಲೂರು ಪಟ್ಟಣ ಪಂಚಾಯಿತಿ ವತಿಯಿಂದ ಬೀದಿ ನಾಯಿಗಳ ಸಂತಾನಹರಣ ಕೇಂದ್ರ ಮಾಡಲು ತಾಲ್ಲೂಕು ಭೂಮಾಪಕರು ಸ್ಥಳ ಪರಿಶೀಲಿಸಲು ನಮ್ಮ ಗ್ರಾಮಕ್ಕೆ ಬಂದಿದ್ದಾರೆ. ಸದರಿ ಜಮೀನಿನಲ್ಲಿ ಈಗಾಗಲೇ ಘನ ತ್ಯಾಜ್ಯ ವಿಲೇವಾರಿ ಘಟಕವನ್ನು ಸ್ಥಾಪಿಸಿರುವುದರಿಂದ ನಮ್ಮ ಗ್ರಾಮದ ಜಮೀನಿನ ಬಳಿ ರೈತಾಪಿ ವರ್ಗದವರು ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ.



ದುರ್ವಾಸನೆ ಬರುತ್ತಿರುವುದರಿಂದ ಸಾಂಕ್ರಮಿಕ ರೋಗ ಹರಡುವ ಭೀತಿಯಿಂದ ಬದುಕುತ್ತಿದ್ದೇವೆ. ಪಕ್ಕದ ಬಾಚನಹಳ್ಳಿ ಗ್ರಾಮದೊಳಗೆ ಬೀದಿ ನಾಯಿಗಳು ಹೆಚ್ಚಾಗಿವೆ ಎಂದು ದೂರಿದರು.

ಘನ ತ್ಯಾಜ್ಯ ವಿಲೇವಾರಿ ವಾಹನವು ಪ್ರತಿದಿನ ಬಾಚನಹಳ್ಳಿ ಮುಖ್ಯ ರಸ್ತೆಯಿಂದಲೆ ಹಾದುಹೋಗುತ್ತಿರುವುದರಿಂದ ಗ್ರಾಮದಲ್ಲಿ ದುರ್ವಾಸನೆಯಿಂದ ಕೂಡಿರುತ್ತದೆ. ಪರ್ಯಾಯ ರಸ್ತೆ ಮಾಡಿ ಸಾಗುವಂತೆ ಕೋರಿದರೂ ಪ್ರಯೋಜನವಾಗಿಲ್ಲ. ಬೀದಿ ನಾಯಿಗಳ ಸಂಗ್ರಹ ಕೇಂದ್ರವನ್ನು ಮಾಡಬಾರದು ಎಂದು ಅವರು ಇದೇ ಸಂದರ್ಭದಲ್ಲಿ ಮನವಿ ಮಾಡಿದರು.

ಸಂಪತ್ ಎಂಬುವರು ಮಾತನಾಡಿ, ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಸ್ಯಾನಿಟರಿ ತ್ಯಾಜ್ಯವನ್ನು ಸಹ ವಿಲೇವಾರಿ ಮಾಡುತ್ತಿರುತ್ತಾರೆ. ಬಾಚನಹಳ್ಳಿ ಗ್ರಾಮ ತ್ಯಾಜ್ಯ ವಿಲೇವಾರಿ ಘಟಕಕ್ಕಿಂತ ತಗ್ಗು ಪ್ರದೇಶದಲ್ಲಿ ಇದೆ. ಮಳೆ ನೀರಿನ ಹರಿವಿನಿಂದ ಮತ್ತು ಎತ್ತರದ ಪ್ರದೇಶದಿಂದ ತಗ್ಗು ಪ್ರದೇಶಕ್ಕೆ ಗಾಳಿ ಬೀಸುವುದರಿಂದ ಸಾಂಕ್ರಮಿಕ ರೋಗ ಹರಡುವ ಭೀತಿ ಎದುರಾಗಿದೆ. ಇಂತಹ ಸನ್ನಿವೇಷದಲ್ಲಿ ಬೀದಿ ನಾಯಿಗಳ ಸಂತಾನ ಹರಣ ಕೇಂದ್ರವನ್ನು ಸ್ಥಾಪಿಸುವ ಉದ್ದೇಶ ಹೊಂದಿರುವುದನ್ನು ಕೈ ಬಿಡಬೇಕು ಎಂದು ಹೇಳಿದರು.

ತಹಸೀಲ್ದಾರ್ ಮತ್ತು ಪಟ್ಟಣ ಪಂಚಾಯಿತಿಗೆ ಮನವಿ ಸಲ್ಲಿಸಲಾಗಿದೆ. ಘಟಕ ತೆರೆಯಲು ಮುಂದುವರಿಸಿದರೆ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸುವುದಾಗಿ ಇದೇ ಸಂದರ್ಭದಲ್ಲಿ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮನು, ಶರತ್, ಲಿಖಿತ್ ಭಾಗವಹಿಸಿದ್ದರು.

# ಸ್ಕಾಲರ್ಸ್ ಶಾಲೆಯಲ್ಲಿ ರಸ್ತೆ ಸುರಕ್ಷತಾ ಅಭಿಯಾನ

• ಪ್ರಜೋದಯ ವರದಿ

**ಹಾಸನ:** ನಗರದ ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಪ್ರಾದೇಶಿಕ ಸಾರಿಗೆ ಇಲಾಖೆ ವತಿಯಿಂದ ಗುರುವಾರ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಅಭಿಯಾನ ಅಂಗವಾಗಿ ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಜಿ.ಪಿ.ಪ್ರಕಾಶ್ ಅವರು ಮಾತನಾಡಿ, ರಸ್ತೆ ಸುರಕ್ಷತೆ–ಜೀವದ ರಕ್ಷಣೆ ಎಂಬ ಧ್ಯೇಯ ವಾಕ್ಯದೊಂದಿಗೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ. ಬೈಕ್‌ನಲ್ಲಿ ಸಂಚರಿಸುವವರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಸೀಟ್ ಬೆಲ್ಟ್ ಧರಿಸಿದರೆ ಅಪಘಾತ ಸಂಭವಿಸಿದರೆ ಪ್ರಾಣಾಪಾಯದಿಂದ ಪಾರಾಗಬಹುದು. ಮಕ್ಕಳು ರಸ್ತೆ ಸುರಕ್ಷತಾ



ನಿಯಮ ಪಾಲಿಸಬೇಕು. ಪೋಷಕರಿಗೂ ತಿಳುವಳಿಕೆ ನೀಡಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳಿಗೆ ಹೆಲ್ಮೆಟ್ ಧರಿಸುವುದು ಹಾಗು ಸಂಚಾರ ನಿಯಮ ಪಾಲಿಸುವ ವಿಧಾನಗಳನ್ನು ಪ್ರಾಯೋಗಿಕವಾಗಿ ತಿಳಿಸಲಾಯಿತು. ಸಂಚಾರ ಪೊಲೀಸ್ ನಿರೀಕ್ಷಕ ದಯಾನಂದ್, ಹಿರಿಯ ನಿರೀಕ್ಷಕ ಪಿ.ಆರ್.ಯಶವಂತ್ ಕುಮಾರ್, ಅಧೀಕ್ಷಕ ಶರತ್ ಚಂದ್ರ, ಶಾಲೆಯ ಆಡಳಿತಾಧಿಕಾರಿ ಡಾ. ಹೆಚ್.ಎನ್. ಚಂದ್ರಶೇಖರ್, ಕಾರ್ಯದರ್ಶಿ ಮಮತಾ ಚಂದ್ರಶೇಖರ್, ಶಾಲೆಯ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಹಾಗೂ ಮತ್ತಿತರರಿದ್ದರು.

# ಸಮುದಾಯವನ್ನು ಒಗ್ಗೂಡಿಸುವ ಕೆಲಸ ಮಾಡಬೇಕು

• ಪ್ರಜೋದಯ ವರದಿ

**ಹಾಸನ:** ಯಾವುದೇ ಸಂಘ ಸಂಸ್ಥೆಗಳು ಸಮುದಾಯವನ್ನು ಒಗ್ಗೂಡಿಸುವ ಕೆಲಸವನ್ನು ಮಾಡಬೇಕು, ಶೈಕ್ಷಣಿಕವಾಗಿ, ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸದೃಢಗೊಂಡು ಸ್ವಾವಲಂಬಿ ಜೀವನ ನಡೆಸಲು ಸಮುದಾಯ ಶಕ್ತವಾಗುವ ರೀತಿಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಿ ಸಂವಿಧಾನದ ನೆಲೆಗಟ್ಟಿನಲ್ಲಿ ನಡೆದುಕೊಂಡು ಹೋಗಬೇಕೆಂಬ ಆಶಯಗಳೊಂದಿಗೆ ಸಮುದಾಯದ ಎಲ್ಲ ಹಿರಿಯರ ಮಾರ್ಗದರ್ಶನ ಸಹಕಾರದೊಂದಿಗೆ ನಡೆದುಕೊಂಡು ಹೋಗೋಣ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ತಿಳಿಸಿದರು.

ಹಾಸನ ಜಿಲ್ಲಾ ವಾಲ್ಮೀಕಿ ನಾಯಕ ಸಂಘ (ರಿ) ವತಿಯಿಂದ ಮುದ್ರಣಗೊಂಡ 2026ನೇ ಸಾಲಿನ ಕ್ಯಾಲೆಂಡರ್




ಅನ್ನು ಅವರು ಬಿಡುಗಡೆ ಮಾಡಿ ಶುಭ ಕೋರಿ ಮಾತನಾಡಿ, ಸಂಘಟನೆಗಳು ಒಗ್ಗಟ್ಟಿನಿಂದ ಇದ್ದಾಗ ಮಾತ್ರ ಸಮುದಾಯದ ಪ್ರಗತಿ ಸಾಧ್ಯ ಎಂದು ಹೇಳಿದರು.

ವಾಲ್ಮೀಕಿ ನಾಯಕ ಸಂಘದ ಜಿಲ್ಲಾಧ್ಯಕ್ಷ ಮಧುನಾಯಕ, ಕಾರ್ಯಾಧ್ಯಕ್ಷ ಧರ್ಮಪ್ಪ ನಾಯಕ, ಪ್ರಧಾನ ಕಾರ್ಯದರ್ಶಿ ಶಿವಪ್ಪ ನಾಯಕ, ಉಪಾಧ್ಯಕ್ಷ ಕುಮಾರ್, ರಾಜಶೇಖರ, ಗಣೇಶ ನಾಯಕ, ಶೇಖರಪ್ಪ, ವಾಲೆಹಳ್ಳಿ ಮಹೇಶ್, ಬೈರಪ್ಪ, ದೇವರಾಜು, ಸಿದ್ದಮಲ್ಲನಾಯಕ, ಅಂಜಿನಿ, ಕರುಣಾಕರ, ಸಂತೋಷ್ ಕುಮಾರ್ ಜಿ ಎಂ, ಸುನಿಲ್ ನೇರ್ಲಿಗೆ, ಸಂಜಯ್, ಜಿತೇಂದ್ರ ಕುಮಾರ್, ರಂಗಸ್ವಾಮಿ, ದಾಮೋದರನಾಯಕ, ಬಿ.ಬಿ.ಶಿವಣ್ಣ, ನಿಂಗರಾಜು, ಅರಕಲಗೂಡು ನಾಗಣ್ಣ, ಸಿದ್ದಯ್ಯ ರಾಮನಾಥಪುರ, ನಿಂಗರಾಜು ಅರಸೀಕೆರೆ, ಚಂದ್ರಶೇಖರ್ ತಟ್ಟಹಳ್ಳಿ, ಹೀರಗುಪ್ಪೆ ಪ್ರಶಾಂತ್ ನಾಯಕ, ಲವನಾಯಕ, ಸುನಿಲ್, ಪುರುಷೋತ್ತಮ, ಕಿರಣ್, ಸುರೇಶ್, ಆನೆಕನ್ನಂಬಾಡಿ ರಮೇಶ್, ಹಾಸನ ತಾಲ್ಲೂಕು ಅಧ್ಯಕ್ಷ ರಂಗನಾಯಕ, ಅರಕಲಗೂಡು ತಾಲ್ಲೂಕು ಅಧ್ಯಕ್ಷ ಬಸವ ನಾಯಕ, ಆಲೂರು ತಾಲ್ಲೂಕು ಅಧ್ಯಕ್ಷ ದೇವರಾಜು, ಚನ್ನರಾಯಪಟ್ಟಣ ತಾಲ್ಲೂಕು ಅಧ್ಯಕ್ಷ ದೀಪು, ಹೊಳೆನರಸೀಪುರ ತಾಲ್ಲೂಕು ಅಧ್ಯಕ್ಷ ಚಂದ್ರನಾಯಕ, ನಿರ್ದೇಶಕರುಗಳಾದ ವೆಂಕಟೇಶ್, ಚಂದ್ರು, ಜನನಾಯಕ, ಆನಂದ್, ಮಂಜುನಾಥ್, ನಾಗರಾಜು, ಪ್ರಸನ್ನಕುಮಾರ್, ಪ್ರದೀಪ್, ಚಂದ್ರನಾಯಕ, ಸತೀಶ್, ಆನಂದ, ನಂದನ್ ಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

## ಹಿರಿಯ ಪರಿಸರ ವಿಜ್ಞಾನಿ ಡಾ.ಮಾಧವ ಗಾಡ್ಗೀಳ್ ನಿಧನ

**ಪುಣೆ:** ಹಿರಿಯ ಪರಿಸರ ವಿಜ್ಞಾನಿ ಮಾಧವ ಧನಂಜಯ ಗಾಡ್ಗೀಳ್



ನಿಧನರಾಗಿದ್ದಾರೆ. ಅವರಿಗೆ 83 ವರ್ಷ ವಯಸ್ಸಾಗಿತ್ತು. ಪಶ್ಚಿಮ ಘಟ್ಟಗಳ ಸಂರಕ್ಷಣಾ ವರದಿಯನ್ನು ರಚಿಸಿದ್ದ ಪರಿಸರವಾದಿ ಮತ್ತು ಬರಹಗಾರ ಡಾ. ಮಾಧವ ಗಾಡ್ಗೀಳ್ ಅವರು ಅನಾರೋಗ್ಯದಿಂದ ಬುಧವಾರ ರಾತ್ರಿ ಪುಣೆಯ ಪ್ರಯಾಗ್ ಆಸ್ಪತ್ರೆಯಲ್ಲಿ ನಿಧನರಾದರು.

1942 ಮೇ 24 ರಂದು ಪುಣೆಯಲ್ಲಿ ಜನಿಸಿದ ಮಾಧವ ಗಾಡ್ಗೀಳ್ ಅವರು ಪುಣೆಯ ಫರ್ಗುಸನ್ ಕಾಲೇಜಿನಿಂದ ಬಿಎಸ್ಸಿ (ಪ್ರಾಣಿಶಾಸ್ತ್ರ) ಪದವಿ ಪಡೆದು 1965 ರಲ್ಲಿ ಅವರು ಹಾರ್ವರ್ಡ್ ವಿ.ವಿ.ಯಿಂದ ಎಂಎಸ್ಸಿ ಪಡೆದು 1969 ರಲ್ಲಿ ಹಾರ್ವರ್ಡ್‌ನಿಂದ ಜೀವಶಾಸ್ತ್ರದಲ್ಲಿ ಪಿಎಚ್‌ಡಿ ಪದವಿ ಪಡೆದಿದ್ದರು.

## ಸಮಗ್ರ ಪರಿಷ್ಕರಣೆಗಾಗಿ ಮನೆ-ಮನೆಗೆ ಭೇಟಿ ನೀಡುವ ಮತಗಟ್ಟೆ ಅಧಿಕಾರಿಗಳಿಗೆ ಅಗತ್ಯ ಮಾಹಿತಿ ನೀಡಲು ಮನವಿ

# ಪ್ರಗತಿಯಲ್ಲಿ ಮತದಾರ ಪಟ್ಟಿ ಮ್ಯಾಪಿಂಗ್: ಜಿಲ್ಲಾಧಿಕಾರಿ

• ಪ್ರಜೋದಯ ವರದಿ

**ಹಾಸನ:** ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ 2025ರ ಮತದಾರ ಪಟ್ಟಿಯನ್ನು 2002 ರ ಪಟ್ಟಿಗೆ ಮ್ಯಾಪಿಂಗ್ ಮಾಡುವ ಕಾರ್ಯ ಪ್ರಗತಿಯಲ್ಲಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ತಿಳಿಸಿದ್ದಾರೆ.

ಮತದಾರರ ಪಟ್ಟಿಗೆ ಮ್ಯಾಪಿಂಗ್ ಕಾರ್ಯ ಎಂದರೇ ಚುನಾವಣಾ ಆಯೋಗವು ಪ್ರಸ್ತುತ ಸಾಲಿನಲ್ಲಿ ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆಯನ್ನು ನಡೆಸಲು ಉದ್ದೇಶಿಸಿರುತ್ತದೆ. ರಾಜ್ಯದಲ್ಲಿ ಈ ಹಿಂದೆ 2002 ನೇ ಸಾಲಿನಲ್ಲಿ ಮತದಾರರ ಪಟ್ಟಿಯ ಸಮಗ್ರ ಪರಿಷ್ಕರಣೆ ನಡೆದಿದ್ದು, ಈ ಪ್ರಕಾರವಾಗಿ 2002 ನೇ ಸಾಲಿನ ಮತದಾರರ ಪಟ್ಟಿಯಲ್ಲಿರುವ ಮತದಾರರ ವಿವರದಂತೆ ಎಲ್ಲಾ ಮತದಾರರ ವಿವರಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಪಡೆದು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಲಾಗಿರುತ್ತದೆ. ಅದರಂತೆ, ಪ್ರಸ್ತುತ 2025 ರ ಮತದಾರರ ಪಟ್ಟಿಯಲ್ಲಿರುವ ಮತದಾರರ ಪೈಕಿ, 2002 ರ ಮತದಾರರ ಪಟ್ಟಿಯಲ್ಲಿದ್ದ ಮತದಾರರ ವಿವರಗಳನ್ನು ಹೊಂದಾಣಿಕೆ ಮಾಡಿ ಮ್ಯಾಪಿಂಗ್ ಮಾಡುವ ಪ್ರಕ್ರಿಯೆಯಾಗಿದೆ.

ಮ್ಯಾಪಿಂಗ್ ಕಾರ್ಯವನ್ನು ನಡೆಸುವ ವಿಧಾನ ಪ್ರತಿಯೊಂದು ಮತಗಟ್ಟೆ ನೇಮಕಾತಿ ಮಾಡಲಾದ ಮತಗಟ್ಟೆ ಅಧಿಕಾರಿಯು ಮ್ಯಾಪಿಂಗ್ ಕಾರ್ಯ ನಿರ್ವಹಿಸುತ್ತಾರೆ. ನೇಮಿಸಲಾದ ಮತಗಟ್ಟೆ ಅಧಿಕಾರಿಯು ಭಾರತ ಚುನಾವಣಾ ಆಯೋಗವು ಅಭಿವೃದ್ಧಿ ಪಡಿಸಿರುವ ತಂತ್ರಾಂಶವನ್ನು ಬಳಸಿ, 2025 ರ ಮತದಾರರ ಪಟ್ಟಿಗೆ 2002 ರ ಮತದಾರರ ಪಟ್ಟಿಯಲ್ಲಿರುವ ಮತದಾರರ ವಿವರಗಳನ್ನು ಹೊಂದಾಣಿಕೆ ಮಾಡಿ ಪರಿಶೀಲಿಸಿ, ಮ್ಯಾಪಿಂಗ್ ಕಾರ್ಯವನ್ನು



ನಿರ್ವಹಿಸುತ್ತಾರೆ ಎಂದಿದ್ದಾರೆ.

**ಸಂತತಿ ಮ್ಯಾಪಿಂಗ್:** 2025 ರ ಮತದಾರರ ಪಟ್ಟಿಗೆ 2002 ರ ಮತದಾರರ ಪಟ್ಟಿಯಲ್ಲಿರುವ ಮತದಾರರ ವಿವರಗಳನ್ನು ಹೊಂದಾಣಿಕೆ ಮಾಡಲಾದ ಮತದಾರರ ಕುಟುಂಬದ ಸಂತತಿ (ಮಗ, ಮಗಳು, ಮೊಮ್ಮಗ ಅಥವಾ ಮೊಮ್ಮಗಳು) ಅವರನ್ನು ಮ್ಯಾಪಿಂಗ್ ಮಾಡುವ ಪ್ರಕ್ರಿಯೆಯಾಗಿದೆ.

ಮ್ಯಾಪಿಂಗ್ ಮಾಡಲಾದ ಮತದಾರರು ಮತದಾರರ ಸಮಗ್ರ ಪರಿಷ್ಕರಣೆ ಸಂದರ್ಭದಲ್ಲಿ ಮನೆ-ಮನೆಗೆ ಭೇಟಿ ನೀಡುವ ಮತಗಟ್ಟೆ ಅಧಿಕಾರಿಗಳಿಗೆ ಅಗತ್ಯ ಮಾಹಿತಿ ಒದಗಿಸಬೇಕು.

ಮತದಾರರ ಮ್ಯಾಪಿಂಗ್ ಕಾರ್ಯಕ್ಕೆ ಸ್ಪಂದಿಸದೇ ಇದ್ದ ಪಕ್ಷದಲ್ಲಿ ಅಥವಾ ಮಾಹಿತಿ ನೀಡದೇ ಇದ್ದ ಪಕ್ಷದಲ್ಲಿ, ಅಂತಹ ಮತದಾರರು ಮುಂಬರುವ ಮತದಾರರ ಸಮಗ್ರ ಪರಿಷ್ಕರಣೆ ಸಂದರ್ಭದಲ್ಲಿ ಭಾರತ ಪ್ರಜೆ ಎಂದು ಪ್ರಮಾಣೀಕರಿಸಲು ಆಯೋಗವು ನಿಗದಿಪಡಿಸಿರುವ 11 ಬಗೆಯ ದಾಖಲಾತಿಗಳ ಪೈಕಿ ಒಂದನ್ನು ಒದಗಿಸುವುದು ಕಡ್ಡಾಯವಾಗಿರುತ್ತದೆ.

ನಿಮ್ಮ ಮತಗಟ್ಟೆ ಹಂತದ ಅಧಿಕಾರಿಗಳನ್ನು ಸಂಪರ್ಕ ಮಾಡಲು ಅಥವಾ ಮತಗಟ್ಟೆ ಅಧಿಕಾರಿಗಳು ನಿಮ್ಮ ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಗತ್ಯ ಮಾಹಿತಿಯನ್ನು ಒದಗಿಸುವಂತೆ ಅವರು ತಿಳಿಸಿದ್ದಾರೆ.

ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರಕ್ಕೆ ಮತದಾರರ ನೋಂದಣಾಧಿಕಾರಿ ಎನ್.ಹೆಚ್.75ರ ವಿಶೇಷ ಭೂಸ್ವಾಧೀನಾಧಿಕಾ ರೇಖಾ 9844010883, ಸಹಾಯಕ ಮತದಾರರ ನೋಂದಣಾಧಿಕಾರಿ ಶಂಕರ್, ತಹಶೀಲ್ದಾರ್ ಚನ್ನರಾಯಪಟ್ಟಣ 6363006938.

ಅರಸೀಕೆರೆಗೆ ಎನ್.ಹೆಚ್.375ರ ವಿಶೇಷ ಭೂಸ್ವಾಧೀನಾಧಿಕಾರಿ ಡಾ. ಮಂಜುನಾಥ– 9449343588 ಸಹಾಯಕ ಮತದಾರರ ನೋಂದಣಾಧಿಕಾರಿ ಎಂ.ಜಿ. ಸಂತೋಷ್ ಕುಮಾರ್, ತಹಶೀಲ್ದಾರ್, 9964063630,

ಬೇಲೂರಿಗೆ ಎತ್ತಿನಹೊಳೆ ಯೋಜನೆಯ ವಿಶೇಷ ಭೂಸ್ವಾಧೀನಾಧಿಕಾರಿ ಜಗದೀಶ್ ಗಂಗಣ್ಣವರ್, 9742094639, ಸಹಾಯಕ ಮತದಾರರ ನೋಂದಣಾಧಿಕಾರಿ ಶ್ರೀಧರ್ ಕಂಕಣವಾಡಿ, ತಹಶೀಲ್ದಾರ್, 9535799825

ಹಾಸನಕ್ಕೆ ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣವರ್ 9742094639, ಸಹಾಯಕ ಮತದಾರರ ನೋಂದಣಾಧಿಕಾರಿ ಸಿ.ಜಿ. ಗೀತಾ, ತಹಶೀಲ್ದಾರ್, 7892395211

ಹೊಳೆನರಸೀಪುರಕ್ಕೆ ಹೇಮಾವತಿ ಜಲಾಶಯ ಯೋಜನೆಯ ವಿಶೇಷ ಭೂಸ್ವಾಧೀನಾಧಿಕಾರಿ ಡಾ. ಮಂಜುನಾಥ, 9449343588 ಸಹಾಯಕ ಮತದಾರರ ನೋಂದಣಾಧಿಕಾರಿ ವೈ.ಎಂ. ರೇಣುಕುಮಾರ್, ತಹಶೀಲ್ದಾರ್, 9448158273.

ಅರಕಲಗೂಡಿಗೆ ಡಿಯುಡಿಸಿ ಯೋಜನಾ ನಿರ್ದೇಶಕರು ಬಿ.ಕೆ. ರುದ್ರಮುನಿ ಹಾಸನ. 9741883704, ಸಹಾಯಕ ಮತದಾರರ ನೋಂದಣಾಧಿಕಾರಿ ಕೆ.ಸಿ.ಸೌಮ್ಯ, ತಹಶೀಲ್ದಾರ್, ಅರಕಲಗೂಡು. 8073956295 ಹಾಗೂ

ಸಕಲೇಶಪುರ ವಿಧಾನಸಭಾ ಕ್ಷೇತ್ರಕ್ಕೆ ಮತದಾರರ ನೋಂದಣಾಧಿಕಾರಿ ಸಕಲೇಶಪುರದ ಉಪವಿಭಾಗಾಧಿಕಾರಿ ಡಾ.ಮಂಜುನಾಥ ವಿ., 9449343588, ಸಹಾಯಕ ಮತದಾರರ ನೋಂದಣಾಧಿಕಾರಿ ಸುಪ್ರೀತ, ತಹಶೀಲ್ದಾರ್, ಸಕಲೇಶಪುರ. 6360268432, ಮಲ್ಲಿಕಾರ್ಜುನ್, ತಹಶೀಲ್ದಾರ್, ಆಲೂರು. 9535380286.

# ಮೇಘನಾಗೆ ಚಿನ್ನದ ಪದಕ



• ಪ್ರಜೋದಯ ವರದಿ

**ಹಾಸನ:** ಮೈಸೂರು ವಿಶ್ವವಿದ್ಯಾನಿಲಯವು ಇತ್ತೀಚೆಗೆ ನಡೆಸಿದ ಪರೀಕ್ಷೆಯಲ್ಲಿ ನಗರದ ಸಾಲಗಾಮೆ ರಸ್ತೆಯಲ್ಲಿರುವ ಸರ್ಕಾರಿ ಗೃಹ ವಿಜ್ಞಾನ ಕಾಲೇಜಿನ ವಿದ್ಯಾರ್ಥಿನಿ ಎಸ್.ಕೆ.ಮೇಘನಾ ಅವರು ಮನೋವಿಜ್ಞಾನ ವಿಷಯದಲ್ಲಿ ಅತ್ಯುನ್ನತ ಅಂಕಗಳನ್ನು ಗಳಿಸುವ ಮೂಲಕ ವಿಶ್ವವಿದ್ಯಾನಿಲಯಕ್ಕೆ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕವನ್ನು ಮುಡಿಗೇರಿಸಿಕೊಂಡಿದ್ದಾರೆ.

ಮೂಲತಃ ಮೈಸೂರು ಜಿಲ್ಲೆಯವರಾದ ಮೇಘನಾ ಅವರು ಹಾಸನದಲ್ಲಿ ವ್ಯಾಸಂಗ ಮಾಡುತ್ತಾ ಶೈಕ್ಷಣಿಕವಾಗಿ ಅಪ್ರತಿಮ ಸಾಧನೆ ತೋರಿದ್ದಾರೆ. ಕಳೆದ ಜುಲೈ 2025ರಲ್ಲಿ ನಡೆದ ಪರೀಕ್ಷೆಗಳಲ್ಲಿ ಇವರು ತೋರಿದ ಅತ್ಯುತ್ತಮ ಪ್ರದರ್ಶನವನ್ನು ಪರಿಗಣಿಸಿ, ಜ.5 ರಂದು ಮೈಸೂರಿನಲ್ಲಿ ನಡೆದ 106ನೇ ಘಟಿಕೋತ್ಸವದಲ್ಲಿ ಇವರಿಗೆ ಅಧಿಕೃತವಾಗಿ ಬಂಗಾರದ ಪದಕ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಈ ಸಾಧನೆಯ ಮೂಲಕ ಮೇಘನಾ ಅವರು ತಮ್ಮ ಕಾಲೇಜಿಗೆ ಮಾತ್ರವಲ್ಲದೆ ಜಿಲ್ಲೆಯ ಕೀರ್ತಿಯನ್ನೂ ಹೆಚ್ಚಿಸಿದ್ದಾರೆ. ಇವರ ಸಾಧನೆಗೆ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು, ಸ್ನೇಹಿತರು ಹಾಗೂ ಪೋಷಕರು ಅಭಿನಂದನೆ ಸಲ್ಲಿಸಿದ್ದಾರೆ.

